ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 54

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಸೋಮವಾರ: 02-02-2026

ಸುದ್ದಿ ಮತ್ತು ಜಾಹೀರಾತಿಗಾಗಿ

6360866626

## ಕೇಂದ್ರದ ಮುಂಗಡ ಪತ್ರ ಮಂಡನೆ, ರಾಜ್ಯಕ್ಕೆ ಯಾವುದೇ ಘೋಷಣೆ ಇಲ್ಲ: -ಸಿದ್ದರಾಮಯ್ಯ ಕರ್ನಾಟಕಕ್ಕೆ ದೊಡ್ಡ ಅನ್ಯಾಯ, ನಿರಾಶದಾಯಕ-ದೂರದೃಷ್ಟಿ ಇಲ್ಲದ ಬಜೆಟ್

**ಕಲಬುರಗಿ, ಫೆ.1:** ಕೇಂದ್ರ ಸರ್ಕಾರವು ತನ್ನ 2026-27ನೇ ಸಾಲಿನ ಮುಂಗಡ ಪತ್ರ ಭಾನುವಾರ ಮಂಡಿಸಿದ್ದು, ರಾಜ್ಯಕ್ಕೆ ನ್ಯಾಯ ದೊರಕಿಸುವಂತಹ ಯಾವುದೇ ಘೋಷಣೆ ಮಾಡದೆ ಇರುವ ನಿರಾಶದಾಯಕ ಮತ್ತು ದೂರದೃಷ್ಟಿ ಇಲ್ಲದ ಬಜೆಟ್ ಇದಾಗಿದೆ. ಕರ್ನಾಟಕ ರಾಜ್ಯಕ್ಕೆ ಬಹುದೊಡ್ಡ ಅನ್ಯಾಯ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ರವಿವಾರ ಕಲಬುರಗಿ ವಿಮಾನ ನಿಲ್ದಾಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಅವರು 13ನೇ ಬಾರಿಗೆ ಆಯವ್ಯಯ ಮಂಡಿಸಿದ್ದಾರೆ. ರಾಜ್ಯಕ್ಕೆ ಒಂದು ಯೋಜನೆಗಳಿಲ್ಲ. ಬರೀ ಹೇಳಿಕೆಗಳಿಂದ ಕೂಡಿದ ಬಜೆಟ್ ಇದಾಗಿದೆ. ರಾಜ್ಯಕ್ಕೆ ಏನೇನೂ ಕೊಟ್ಟಿಲ್ಲ. ಬೆಂಗಳೂರು-ಹೈದ್ರಾಬಾದ್, ಬೆಂಗಳೂರು-ಚೆನ್ನೈ ಹೈಸ್ಪೀಡ್ ರೈಲು ಕೊಟ್ಟಿದ್ದಾರೆ. ಆದರೆ ಇದರಿಂದ ನಮಗಿಂತ ಆಂದ್ರಪ್ರದೇಶ ಹಾಗೂ ತಮಿಳುನಾಡಿನವರಿಗೆ ಅನುಕೂಲ ಆಗುತ್ತದೆ. ಬೆಂಗಳೂರು-ಮುಂಬೈ, ಬೆಂಗಳೂರು-ಪುಣೆ, ಬೆಂಗಳೂರು-ಮಂಗಳೂರು ಹೈಸ್ಪೀಡ್ ರೈಲು ನೀಡಲು ಬೇಡಿಕೆ ಸಲ್ಲಿಸಲಾಗಿತ್ತು. ಅದಕ್ಕೆ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಳೆದ 2025-26ನೇ ಸಾಲಿನ ಕೇಂದ್ರದ ಆಯವ್ಯಯದಲ್ಲಿ 50,65,345 ಕೋಟಿ ರೂ. ಮೊತ್ತದ ಬಜೆಟ್ ಮಂಡಿಸಿದ್ದರು ಅದು ಪರಿಷ್ಕೃತಗೊಂಡು 49,64,842 ಕೋಟಿ ರೂ. ಮೀಸಲಾಗಿದೆ. ಸುಮಾರು 1 ಲಕ್ಷ ಕೋಟಿಗೂ ಕಡಿಮೆ ಗಾತ್ರಕ್ಕೆ ಪರಿಷ್ಕರಿಸಿದ್ದಾರೆ. 2026-27ನೇ ಸಾಲಿನ ಆಯವ್ಯಯ ನೋಡುವುದಾದರೆ ಕಳೆದ ವರ್ಷಕ್ಕಿಂತ ಶೇ.5.56 ರಷ್ಟು ಹೆಚ್ಚಿನ ಗಾತ್ರದೊಂದಿಗೆ 53,47,315 ಕೋಟಿ ರೂ. ಮೊತ್ತದ ಬಜೆಟ್ ಮಂಡಿಸಿದ್ದರು, ರಾಜ್ಯಗಳಿಗೆ ನ್ಯಾಯ ದೊರಕಿಸಲು ಸಾಧ್ಯವಾಗಿಲ್ಲ ಎಂದು ಮುಖ್ಯಮಂತ್ರಿ ಬಜೆಟ್ ಕುರಿತು ಪ್ರತಿಕ್ರಿಯೆಸಿದರು.

ಕೇಂದ್ರ ಸರ್ಕಾರ ವಿಕಸಿತ ಭಾರತದ ಬಗ್ಗೆ ಬಹಳ ಮಾತಾನಾಡುತ್ತದೆ. ಇದೆಲ್ಲಾ ಮಾತಿನಲ್ಲಿ ಇದೆಯೇ ಹೊರತು



ಕೃತಿಗೆ ಇಳಿದಿಲ್ಲ. ನಾವು ನಮ್ಮ ರಾಜ್ಯದ ನೀರಾವರಿ ಯೋಜನೆ ಬಗ್ಗೆ ಕೇಳಿದ್ದೇವು. ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ರಾಷ್ಟ್ರೀಯ ಯೋಜನೆ ಮಾಡಿ ಎಂದು ಕೇಳಲಾಗಿತ್ತು. 2023-24ನೇ ಸಾಲಿನ ಬಜೆಟ್‌ನಲ್ಲಿ 5,300 ಕೋಟಿ ರೂ. ನೀಡುವುದಾಗಿ ಘೋಷಣೆ ಮಾಡಿದ್ದೀರಿ, ಅದನ್ನಾದರು ಕೊಡಿ ಎಂದು ಕೇಳಿದ್ವಿ ಒಂದು ರೂಪಾಯಿ ಕೊಟ್ಟಿಲ್ಲ. ಗೆಜಟ್ ನೋಟಿಫಿಕೇಷನ್ ಸಹ ಮಾಡಿಲ್ಲ ಎಂದು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

ಮಹಾದಾಯಿ ಯೋಜನೆಗೆ ಪರಿಸರ ಅನುಮತಿ ನೀಡಬಹುದು ಎಂದು ನಿರೀಕ್ಷಿಸಲಾಗಿತ್ತು, ಅದು ಹುಸಿಯಾಗಿದೆ. ಮೇಕೆದಾಟು ಯೋಜನೆಗೆ ತಮಿಳುನಾಡು ಸುಪ್ರೀಂ ಕೋರ್ಟನಲ್ಲಿ ಅರ್ಜಿ ಹಾಕಿದ್ರು. ಅರ್ಜಿ ವಜಾ ಆಗಿದೆ. ಆದ್ರೂ ಮೇಕೆ ದಾಟು ಯೋಜನೆಗೆ ಹಸಿರು ನಿಶಾನೆ ತೋರುತ್ತಿಲ್ಲ. ಮೇಕೆದಾಟು ತಮಿಳುನಾಡಿನಲ್ಲಿ ಅಲ್ಲ ಕರ್ನಾಟಕದಲ್ಲಿ ಕಟ್ಟೋದು. ಮಳೆಗಾಲ ಸರಿಯಾಗಿ ಆದ್ರೆ 177.25 ಟಿ.ಎಂ.ಸಿ ಕೊಡಬೇಕು ಅಂತ ತೀರ್ಪು ಇದೆ. ಈ ವರ್ಷ ಅದರ ಎರಡರಷ್ಟು ನೀರು ಬಿಟ್ಟಿದ್ದೀವಿ. ಇದರಿಂದ ತಮಿಳುನಾಡಿನವರಿಗೆ ಏನು ತೊಂದರೆ ಆಗಲ್ಲ. ಕ್ಲಿಯರ್ ಮಾಡಿಕೊಡಿ ಎಂದು ಒತ್ತಾಯ ಮಾಡಿದ್ವಿ. ಇದುವರೆಗೂ ಕ್ಲಿಯರೆನ್ಸ್ ಕೊಟ್ಟಿಲ್ಲ. ಇದರಿಂದ ಉತ್ತರ ಕರ್ನಾಟಕಕ್ಕೆ ಮತ್ತು ಕರ್ನಾಟಕಕ್ಕೆ ಅನ್ಯಾಯವಾಗಿದೆ ಎಂದು ಪುನರುಚ್ಚಿಸಿದರು.

ನಮ್ಮ ಮೆಟ್ರೋಗೆ ನೆರವು ಕೊಟ್ಟಿಲ್ಲ. ರಾಯಚೂರು ಏಮ್ಸ್ ಬಗ್ಗೆ ಯಾವುದೇ ಚಕಾರ ಎತ್ತಿಲ್ಲ. 371ಜೆ ಅನ್ವಯ ವಿಶೇಷ ಮೀಸಲಾತಿ ಸೌಲಭ್ಯ ಪಡೆದಿರುವ ಹಿಂದುಳಿದ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕೆ.ಕೆ.ಆರ್.ಡಿ.ಬಿ ಮಂಡಳಿಗೆ ನಮ್ಮ ಸರ್ಕಾರ ಪ್ರತಿ ವರ್ಷ 5,000 ಕೋಟಿ ರೂ. ನೀಡುತ್ತಿದ್ದು, ಮ್ಯಾಚಿಂಗ್ ಗ್ರ್ಯಾಂಟ್ ನೀಡುವಂತೆ ಕೋರಲಾಗಿತ್ತು. ಅದು ಸಹ ಕೊಟ್ಟಿಲ್ಲ. ಇದರ ಬಗ್ಗೆ ಒಂದೇ ಒಂದು ಶಬ್ದ ಇಲ್ಲ. ನಾವು ಅಧಿಕಾರಕ್ಕೆ ಬಂದ ಮೇಲೆ ಕಳೆದ 2.5 ವರ್ಷದಲ್ಲಿ 13 ಸಾವಿರ ಕೋಟಿ ರೂ. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಕೊಟ್ಟಿದ್ದೇವೆ ಎಂದರು.

16ನೇ ಹಣಕಾಸು ಅನುದಾನದ ನೀಡುವಲ್ಲಿಯೂ ತಾರತಮ್ಯ:

16ನೇ ಹಣಕಾಸು ಆಯೋಗವು ರಾಜ್ಯಕ್ಕೆ ಶೇ.4.131ರಷ್ಟು ಪಾಲು ಹಂಚಿಕೆ ಮಾಡಲು ಶಿಫಾರಸ್ಸು ಮಾಡಿರುವುದು ಸಹ ರಾಜ್ಯಕ್ಕೆ ಅನ್ಯಾಯವಾದಂತಾಗಿದೆ. 14ನೇ ಹಣಕಾಸಿನ ಆಯೋಗದ ವರದಿಯಲ್ಲಿ ಕರ್ನಾಟಕಕ್ಕೆ ಶೇ.4.71 ತೆರಿಗೆ ಪಾಲು ಸಿಕ್ಕಿತ್ತು. ಆದರೆ 15ನೇ ಹಣಕಾಸು ಆಯೋಗದಲ್ಲಿ ಅದು ಶೇ.3.64ಕ್ಕೆ ಇಳಿದಿದ್ದರಿಂದ ಶೇ.23ರಷ್ಟು ನಷ್ಟವಾಗಿತ್ತು. ಇದು ಪುನರಾವರ್ತನೆ ಆಗಬಾರದೆಂದು 16ನೇ ಹಣಕಾಸು ಶಿಫಾರಸ್ಸು ಮುನ್ನ ಪ್ರಬಲವಾಗಿ ವಾದ ಮಂಡಿಸಿ ಕನಿಷ್ಟ ಪಕ್ಷ 14ನೇ ಹಣಕಾಸಿನ ಆಯೋಗದಕ್ಕಿಂತ ಜಾಸ್ತಿ ಮಾಡಲು ಕೇಳಿದ್ವಿ. ಇಷ್ಟಾದರೂ 16ನೇ ಹಣಕಾಸು ಆಯೋಗದಲ್ಲಿ ಶೇ.4.131 ರಷ್ಟು ಮಾತ್ರ ಕೊಟ್ಟಿದ್ದಾರೆ ಎಂದರು.

ಇನ್ನು ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಮುಂದಿನ 5 ವರ್ಷಗಳಿಗೆ ಅನುದಾನ ಹಂಚಿಕೆ ಮಾಡಿದ್ದು, ಇದರಲ್ಲಿ ಉತ್ತರ ಪ್ರದೇಶಕ್ಕೆ 1,16,804 ಕೋಟಿ ರೂ., ಮಹಾರಾಷ್ಟ್ರ ರಾಜ್ಯಕ್ಕೆ 79,620 ಕೋಟಿ ರೂ., ಪಶ್ಚಿಮ ಬಂಗಾಲ ರಾಜ್ಯಕ್ಕೆ 50,226 ಕೋಟಿ ರೂ., ಮಧ್ಯಪ್ರದೇಶ ರಾಜ್ಯಕ್ಕೆ 48,049 ಕೋಟಿ ರೂ., ರಾಜಸ್ಥಾನ ರಾಜ್ಯಕ್ಕೆ 44,147 ಕೋಟಿ ರೂ., ಗುಜರಾತ್ ರಾಜ್ಯಕ್ಕೆ 42,566 ಕೋಟಿ ರೂ., ತಮಿಳುನಾಡು ರಾಜ್ಯಕ್ಕೆ 41,999 ಕೋಟಿ ರೂ. ನೀಡಿದರೆ ಕರ್ನಾಟಕಕ್ಕೆ

2ನೇಪುಟಕ್ಕೆ►

## 1,051 ಕೋಟಿ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಜಾರಿ: ಪ್ರಿಯಾಂಕ್ ಖರ್ಗೆ



**ಕಲಬುರಗಿ,ಫೆ.1**-ಜಿಲ್ಲೆಯ ಪ್ರತಿ ಹಳ್ಳಿಗೂ, ಪ್ರತಿ ಮನೆಗೂ ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರಕ್ಕಾಗಿ ಗ್ಯಾರಂಟಿ ಸರ್ಕಾರವು ಈಗಾಗಲೇ ಹಲವು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ನಂತರ ಬಹುಗ್ರಾಮ ಕುಡಿಯುವ ನೀರು ಯೋಜನೆಗಾಗಿ ಜಿಲ್ಲೆಗೆ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಿದೆ. ಜಿಲ್ಲೆಯ ತಾಲೂಕುಗಳಲ್ಲಿ 1,051.5 ಕೋಟಿ ಅಂದಾಜು ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ಯೋಜನೆ ಕಾಮಗಾರಿಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ.

ಕುಡಿಯುವ ನೀರು ಸರಬರಾಜು ಜಾರಿಗೊಳಿಸುವ ಯೋಜನೆಯ ವಿವರಗಳು ಹೀಗಿವೆ. ಕಲಬುರಗಿಯ ಪ್ರತಿ ತಾಲೂಕಿನಲ್ಲಿ ಶುದ್ಧ ಕುಡಿಯುವ ನೀರು ಯೋಜನೆಗಳಿಗೆ ಅನುದಾನ ಮತ್ತು ಕಾಮಗಾರಿಗಳ ಪ್ರಗತಿ ವಿವರ:

16 ಕೋಟಿ ವೆಚ್ಚದಲ್ಲಿ ಅಫಜಲಪುರ

2ನೇಪುಟಕ್ಕೆ►

## ರಾಷ್ಟ್ರೀಯ ರಸ್ತೆ ಸುರಕ್ಷತೆ ಮಾಸ ಅಂಗವಾಗಿ ಕಾನೂನು ಅರಿವು ಹಾಗೂ ನೆರವು ಕಾರ್ಯಕ್ರಮ

ಧೈರ್ಯದ ದಾರಿ




**ಮಾನ್ವಿ,ಫೆ.1**- ಪಟ್ಟಣದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಘಟಕದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯ ವಾದಿಗಳ ಸಂಘ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಡೆದ ರಾಷ್ಟ್ರೀಯ ರಸ್ತೆ ಸುರಕ್ಷತೆ ಮಾಸ ಅಂಗವಾಗಿ ನಡೆದ ಕಾನೂನು ಅರಿವು ಹಾಗೂ ನೆರವು ಕಾರ್ಯಕ್ರಮವನ್ನು ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಆನಂದ ಹೆಚ್,ಕೊಣ್ಣೂರು ಉದ್ಘಾಟಿಸಿ ಮಾತನಾಡಿ ಸಂಚಾರ ನಿಯಮಗಳನ್ನು ಸುಗಮವಾದ ಸಂಚಾರಕ್ಕಾಗಿ ಹಾಗೂ ನಮ್ಮ ಅಮೂಲ್ಯವಾದ ಜೀವವನ್ನು ಉಳಿಸಿಕೊಳ್ಳುವುದಕ್ಕಾಗಿ ರೂಪಿಸಲಾಗಿದೆ ರಸ್ತೆಯ ನಿಯಮಗಳನ್ನು ಪಾಲಿಸುವುದರಿಂದ ಸುರಕ್ಷಿತವಾದ ಪ್ರಯಾಣ ಸಾಧ್ಯವಿದೆ ಅದ್ದರಿಂದ ವಾಹನಗಳನ್ನು ಚಾಲನೆ ಮಾಡುವವರು ಅತಿಯಾದ ವೇಗದಲ್ಲಿ ತಮ್ಮ ವಾಹನಗಳನ್ನು ಚಾಲಾಯಿಸಬಾರದು ವಾಹನಗಳಿಗೆ ವಿಮೆಯನ್ನು ಮಾಡಿಸಿರಬೇಕು ದ್ವಿಚಕ್ರ ವಾಹನದಾರರು ಹೆಲ್ಮಟ್ ಹಾಕದೆ ವಾಹನವನ್ನು ಚಾಲಯಿಸುವ ಸಮಯದಲ್ಲಿ ಅಪಘಾತಗಳು ಸಂಬವಿಸಿ ತಲೆಗೆ ತೀವ್ರವಾದ ಪೆಟ್ಟಾಗಿ ಸಾವು ಸಂಬವಿಸಿದ ಅನೇಕ ಪ್ರಕರಣಗಳನ್ನು ಕಾಣಬಹುದಾಗಿದೆ. ನಮ್ಮನ್ನು ನಂಬಿರುವ ಕುಟುಂಬದವರಿಗಾಗಿ ರಸ್ತೆಯ ನಿಯಮಗಳನ್ನು ಪಾಲಿಸಬೇಕು ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ

2ನೇಪುಟಕ್ಕೆ

## ಶ್ರೀ ಮಡಿವಾಳ ಮಾಚಿದೇವ ಜಯಂತಿ ಆಚರಣೆ



ಧೈರ್ಯದ ದಾರಿ

**ಮಾನ್ವಿ,ಫೆ.1**- ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ಹಾಗೂ ತಾ. ಮಡಿವಾಳ ಸಮಾಜದ ಸಂಯುಕ್ತಾಶ್ರಯದಲ್ಲಿ ನಡೆದ ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ಉಪತಹಶೀಲ್ದಾರ್ ವಿನಾಯಕರಾವ್ ಶ್ರೀ ಮಡಿವಾಳ ಮಾಚಿದೇವರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸುವ ಮೂಲಕ ಜಯಂತಿಯನ್ನು ಆಚರಿಸಿ ಮಾತನಾಡಿ 12 ನೇ ಶತಮಾನದಲ್ಲಿ ಬಸವಾದಿ ಶರಣರಲ್ಲಿ ಶ್ರೀ ಮಡಿವಾಳ ಮಾಚಿದೇವರು ಪ್ರಮುಖರಾಗಿದ್ದರು ಅನುಭವ ಮಂಟಪದಲ್ಲಿ ಶರಣರು ರಚಿಸಿದ ಅಮೂಲ್ಯವಾದ ವಚನಗಳ ಕಟ್ಟುಗಳನ್ನು ಸಂರಕ್ಷಿಸುವಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸಿದ್ದರು ಎಂದು ತಿಳಿಸಿದರು.

ಮಡಿವಾಳ ಸಮಾಜದ ತಾ. ಗೌರವಾಧ್ಯಕ್ಷರಾದ ಎಂ. ನಾಗರಾಜ ಮಾತನಾಡಿ 12 ನೇ ಶತಮಾನದಲ್ಲಿ ಶ್ರೀ ಮಡಿವಾಳ ಮಾಚಿದೇವರವರು ತಮ್ಮ ಕಾಯಕದ ಶ್ರೇಷ್ಟತೆಯಿಂದ ಹೆಸರಾಗಿದ್ದರು ಅವರ ತತ್ವ ಅದರ್ಶಗಳನ್ನು ನಾವೆಲ್ಲರು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ ನಮ್ಮ ಮಡಿವಾಳ ಸಮಾಜ ಆರ್ಥಿಕವಾಗಿ,ಸಮಾಜಿಕವಾಗಿ,ರಾಜಕೀಯವಾಗಿ ಅತ್ಯಂತ ಹಿಂದುಳಿದಿರುವುದಕ್ಕೆ ಸಂಘಟನೆಯ ಕೊರತೆಯೆ ಕಾರಣ ತಾಲೂಕಿನಲ್ಲಿ ಮಾಡಿವಾಳ ಮಾಚಿದೇವರ ಮೂರ್ತಿ ಪ್ರತಿಷ್ಟಪನೆ ಸೇರಿದಂತೆ ಸಮುದಾಯ ಭವನದ ಅಗತ್ಯವಿದೆ , ಸಮಾಜದವರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಬೇಕು ಎಂದು ತಿಳಿಸಿದರು.

ಮಡಿವಾಳ ಸಮಾಜದ ತಾ. ಅಧ್ಯಕ್ಷರಾದ ಅಶೋಕ ಮಡಿವಾಳ,ಕಾರ್ಯದರ್ಶಿ ಹುಲಿಗೆಪ್ಪ ಅರೋಲಿ, ಮಾಜಿ ಅಧ್ಯಕ್ಷರಾದ ಯಲ್ಲಪ್ಪ, ಕಾರ್ಯಧ್ಯಕ್ಷರಾದ ಬಸವರಾಜ ಬ್ಯಾಗವಾಟ, ಖಜಾಂಚಿ ರಮೇಶ , ಸದಸ್ಯರಾದ ನಗೇಶ ಕಬೇರ, ನರಸರೆಡ್ಡಿ , ನಿಂಗಪ್ಪ, ಹನುಮೇಶ , ಚಂದ್ರನಾಯಕ, ಬಾಬುಲ್ , ಉರುಕುಂದಪ್ಪ,ಈರಣ್ಣ ,ನಾಗರಾಜ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು

## ಕರವೇ ರಾಜ್ಯಾಧ್ಯಕ್ಷ ಎಚ್. ಶಿವರಾಮೇಗೌಡ್ರ 63ನೇ ಜನ್ಮದಿನದ ಅಂಗವಾಗಿ ಮಾನ್ವಿಯಲ್ಲಿ ಸೇವಾ ಕಾರ್ಯ



ಧೈರ್ಯದ ದಾರಿ

**ಮಾನ್ವಿ ,ಫೆ.1**- ಕರ್ನಾಟಕ ರಕ್ಷಣಾ ವೇದಿಕೆಯ ಕನ್ನಡಪರ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷರಾದ ಎಚ್ ಶಿವರಾಮೇಗೌಡ್ರ ಅವರ 63ನೇ ಹುಟ್ಟುಹಬ್ಬದ ಅಂಗವಾಗಿ ಮಾನ್ವಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ನಗರದ ನೆರಳು ಅನಾಥಾಶ್ರಮಕ್ಕೆ ಭೇಟಿ ನೀಡಿ ಆಶ್ರಮದಲ್ಲಿರುವ ತಾಯಂದಿರು ಹಾಗೂ ವೃದ್ಧರಿಗೆ ಹಣ್ಣು ಮತ್ತು ಅಕ್ಕಿ ವಿತರಿಸಿ, ಸಸಿಗೆ ನೀರು ಹಾಕುವ ಮೂಲಕ ಶುಭಾಶಯಗಳನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಮಾನ್ವಿ ತಾಲೂಕು ಅಧ್ಯಕ್ಷ ನರಸಿಂಹ ಅವರು, "ನಮ್ಮ ರಾಜ್ಯಾಧ್ಯಕ್ಷರಾದ ಶ್ರೀ ಎಚ್. ಶಿವರಾಮೇಗೌಡ್ರವರಿಗೆ ಜನ್ಮದಿನದ ಹಾರ್ದಿಕ ಶುಭಾಶಯಗಳು. ನಾವು ಮಾಡುವ ಅಳಿಲು ಸೇವೆಗೆ ಪ್ರೇರಣೆ ನೀಡುತ್ತಿರುವ ನಮ್ಮ ನಾಯಕರಿಗೆ ಆ ಭಗವಂತನು ಕನ್ನಡಿಗರ ಸೇವೆ ಮಾಡಲು ಇನ್ನಷ್ಟು ಶಕ್ತಿ ನೀಡಲಿ" ಎಂದು ಹಾರೈಸಿದರು.

ಅದೇ ವೇಳೆ ನೆರಳು ವೃದ್ಧಾಶ್ರಮದ ವ್ಯವಸ್ಥಾಪಕರು ಹಾಗೂ ಅಧ್ಯಕ್ಷರು ಮಾತನಾಡಿ, ರಾಜ್ಯಾಧ್ಯಕ್ಷರಾದ ಹೆಚ್. ಶಿವರಾಮೇಗೌಡ್ರವರಿಗೆ ಜನ್ಮದಿನದ ಶುಭಾಶಯಗಳನ್ನು ತಿಳಿಸಿ, ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರಿಗೆ ಸಮಾಜಸೇವೆ ಮುಂದುವರಿಸಲು ಇನ್ನಷ್ಟು ಶಕ್ತಿ ಸಿಗಲಿ ಎಂದು ಆಶಿಸಿದರು. ಈ ಸಂದರ್ಭದಲ್ಲಿ ತಾಲೂಕು ಗೌರವಾಧ್ಯಕ್ಷರಾದ ಯಲ್ಲಪ್ಪ ನಿಲೋಗಲ್, ಪ್ರಧಾನ ಕಾರ್ಯದರ್ಶಿ ದೀಪಕ್, ನಗರ ಘಟಕ ಗೌರವಾಧ್ಯಕ್ಷ ಶಾಂತಕುಮಾರ್, ಕಾನೂನು ಸಲಹೆಗಾರ ಚೇತನ್ ಕುಮಾರ್, ಸಂಘಟನಾ ಕಾರ್ಯದರ್ಶಿ ಸನತ್ ಕುಮಾರ್, ಹರೀಶ್, ಅಂಬರೀಶ್ ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗಣರಾಜ್ಯೋತ್ಸವದಲ್ಲಿ ಡಾ. ಅಂಬೇಡ್ಕರ್ ಭಾವಚಿತ್ರ ಇರದ ಆರೋಪ ಜನಸೇವಾ ಫೌಂಡೇಶನಿಂದ ಜಿಲ್ಲಾಧಿಕಾರಿಗಳಿಗೆ ದೂರು

ಧೈರ್ಯದ ದಾರಿ



**ಮಾನ್ವಿ ,ಫೆ.1**-ಪಟ್ಟಣದ ಶ್ರೀ ನಗರೇಶ್ವರ ದೇವಸ್ಥಾನದ ಆವರಣದಲ್ಲಿ ಜನವರಿ 26ರಂದು ಆರ್ಯವೈಶ್ಯ ಸಮಾಜದ ವತಿಯಿಂದ ಆಯೋಜಿಸಲಾದ ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾರತದ ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ಅಳವಡಿಸದೇ ಧ್ವಜಾರೋಹಣ ನಡೆಸಲಾಗಿದೆ ಎಂದು ಆರೋಪಿಸಿ ಜನಸೇವಾ ಫೌಂಡೇಶನ್ ನ ತಾಲೂಕು ಘಟಕದ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಜನಸೇವಾ ಫೌಂಡೇಶನ್ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಅವರು, ಗಣರಾಜ್ಯೋತ್ಸವದಂತಹ ರಾಷ್ಟ್ರೀಯ ಹಬ್ಬಗಳಲ್ಲಿ ಸಂವಿಧಾನದ ಪಿತಾಮಹರ ಭಾವಚಿತ್ರವನ್ನು ಗೌರವಪೂರ್ವಕವಾಗಿ ಅಳವಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಆದರೆ ಈ ಕಾರ್ಯಕ್ರಮದಲ್ಲಿ ಭಾವಚಿತ್ರ ಇರದಿರುವುದು ಗಂಭೀರ ನಿರ್ಲಕ್ಷ್ಯವಾಗಿದ್ದು, ಇದು ಸಂವಿಧಾನದ ಮೌಲ್ಯಗಳಿಗೆ ಧಕ್ಕೆಯಾಗಿದೆ ಎಂದು ಹೇಳಿದರು.ಇದೇ ವೇಳೆ ತಾಲೂಕು ಪ್ರಧಾನ ಕಾರ್ಯದರ್ಶಿ ವಾಸುದೇವ ಅವರು ಮಾತನಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋ ದೃಶ್ಯಗಳಲ್ಲಿ ಅಂಬೇಡ್ಕರ್ ಅವರ ಭಾವಚಿತ್ರ ಕಾಣಿಸದಿರುವುದು ಸ್ಪಷ್ಟವಾಗಿದೆ. ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ರಾಷ್ಟ್ರೀಯ ಹಬ್ಬಗಳ ಸಂದರ್ಭದಲ್ಲಿ ಅಗತ್ಯ ಗೌರವ ಪಾಲಿಸಬೇಕು. ಈ ಹಿನ್ನೆಲೆಯಲ್ಲಿ ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪು ಸಾಬೀತಾದಲ್ಲಿ ಸಂಬಂಧಪಟ್ಟ ಆಯೋಜಕರು ಹಾಗೂ ಹೊಣೆಗಾರ ಅಧಿಕಾರಿಗಳ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಿಗೆ ಮಾನ್ವಿ ತಹಸೀಲ್ದಾರರ ಮುಖಾಂತರ ಮನವಿ ಸಲ್ಲಿಸಲಾಗಿದ್ದು, ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಜಿಲ್ಲೆಯ ಎಲ್ಲಾ ಸಂಘಟನೆಗಳಿಗೆ ಸ್ಪಷ್ಟ ಮಾರ್ಗಸೂಚಿಗಳನ್ನು ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಸಂವಿಧಾನಕ್ಕೆ ಗೌರವ ಹಾಗೂ ಸಾರ್ವಜನಿಕ ಶಾಂತಿ ಕಾಪಾಡುವ ನಿಟ್ಟಿನಲ್ಲಿ ತಕ್ಷಣ ಕ್ರಮ ಕೈಗೊಳ್ಳುವಂತೆ ಅವರು ವಿನಂತಿಸಿದ್ದಾರೆ.

ಈ ಸಂದರ್ಭದಲ್ಲಿ ಜನಸೇವಾ ಫೌಂಡೇಶನ್ ಉಪಾಧ್ಯಕ್ಷರಾದ ರಾಜಾಸಾಬ್, ಹಸನ್, ಗೋಕುಲ ಸಾಬ್, ಆಜೀತ್, ಸಿದ್ದರೆಡ್ಡಿ ಸೇರಿದಂತೆ ಇನ್ನಿತರರು ಇದ್ದರು.

ಮೊದಲನೇ ಪುಟದಿಂದ

## ರಾಷ್ಟ್ರೀಯ ರಸ್ತೆ ಸುರಕ್ಷತೆ ಮಾಸ ಅಂಗವಾಗಿ ಕಾನೂನು ಅರಿವು ಹಾಗೂ ನೆರವು ಕಾರ್ಯಕ್ರಮ

ಘಟಕದ ವ್ಯವಸ್ಥಾಪಕರಾದ ನಾಗರಾಜ ಮಾತನಾಡಿ ರಸ್ತೆಯಲ್ಲಿ ಅಪಘಾತ ಸಂಭವಿಸದಂತೆ ವಾಹನವನ್ನು ಚಾಲನೆ ಮಾಡುವುದನ್ನು ಚಾಲನ ಸಿಬ್ಬಂದಿಗಳು ರೂಡಿಸಿಕೊಳ್ಳಬೇಕು ವಾಹನಗಳನ್ನು ಓವರ್ ಟೇಕ್ ಮಾಡುವುದು,ಅತಿ ವೇಗವಾಗಿ ವಾಹನ ಚಾಲನೆ ಮಾಡುವುದು, ಅಪಾಯಕಾರವಾಗಿರುತ್ತದೆ. ಚಾಲಕರು ಸ್ವಲ್ಪ ಸಮಯ ಮುಂಚೆ ಸಾರಿಗೆ ಘಟಕಕ್ಕೆ ಆಗಮಿಸಿ ವಾಹನದ ಸ್ಥಿತಿಯನ್ನು ಪರಿಶೀಲಿಸಿ ಕೊಳ್ಳಬೇಕು. ತಮ್ಮ ಬಸ್ ನಲ್ಲಿ ಶಾಲಾ ಮಕ್ಕಳು,ವೃದ್ದರು,ಮಹಿಳೆಯರು ಸೇರಿದಂತೆ ಅನೇಕರು ಸಂಚಾರಿಸುವುದರಿಂದ ಅವರ ಸುರಕ್ಷತೆಗೆ ಹೆಚ್ಚಿನ ಅದ್ಯತೆಯನ್ನು ನೀಡಬೇಕು ಎಂದು ತಿಳಿಸಿದರು.
ಮಾನ್ವಿ ಪೊಲೀಸ್ ಠಾಣೆಯ ಎ.ಎಸ್.ಐ. ಹನುಮೇಶ ಮಾತನಾಡಿದರು. ಸಹಾಯಕ ಸರ್ಕಾರಿ ಅಭಿಯೋಜಕರಾದ ಅರ್ಚನಾ ಯಾದವ್, ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್, ಪ್ರ.ಕಾರ್ಯದರ್ಶಿ ಯಲ್ಲಪ್ಪಬಾದರದಿನ್ನಿ, ದತ್ತಾತ್ರೇಯ ಹಿರೆಕೋಟ್ನೆಕಲ್,ಚನ್ನಬಸವ ನಾಯಕ ವಕೀಲರು ಸೇರಿದಂತೆ ಸಾರಿಗೆ ಘಟಕದ ಚಾಲಕರು,ನಿರ್ವಹಕರು,ತಾಂತ್ರಿಕ ಸಿಬ್ಬಂದಿಗಳು ಭಾಗವಹಿಸಿದರು.

### ಕೇಂದ್ರದ ಮುಂಗಡ ಪತ್ರ ಮಂಡನೆ, ರಾಜ್ಯಕ್ಕೆ ಯಾವುದೇ ಘೋಷಣೆ ಇಲ್ಲ: -ಸಿದ್ದರಾಮಯ್ಯ ಕರ್ನಾಟಕಕ್ಕೆ ದೊಡ್ಡ ಅನ್ಯಾಯ, ನಿರಾಶದಾಯಕ-ದೂರದೃಷ್ಟಿ ಇಲ್ಲದ ಬಜೆಟ್

ನೀಡಿರುವುದು 37,372 ಕೋಟಿ ರೂ. ಮಾತ್ರ. ಹೆಚ್ಚಿನ ಅನುದಾನ ಉತ್ತರದ ರಾಜ್ಯಗಳಿಗೆ ನೀಡಲಾಗಿದ್ದು, ದಕ್ಷಿಣದ ರಾಜ್ಯಗಳನ್ನು ಕಡೆಗಣಿಸಲಾಗಿದೆ. ಬೇರೆ ರಾಜ್ಯಗಳಿಗೆ ಅನುದಾನ ಕೊಡಬೇಡಿ ಅನ್ನೋದಿಲ್ಲ, ನಮಗೂ ನ್ಯಾಯ ಕೊಡಿ ಅನ್ನೋದು ನಮ್ಮ ವಾದ. ಬಜೆಟ್ ಮುನ್ನವೆ ಪ್ರಧಾನಮಂತ್ರಿ, ಹಣಕಾಸು ಸಚಿವರನ್ನು ಭೇಟಿಯಾಗಿ ರಾಜ್ಯಕ್ಕೆ ನ್ಯಾಯ ಒದಗಿಸುವಂತೆ ಮನವಿ ಮಾಡಿದ್ದೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

**5 ಲಕ್ಷ ಕೋಟಿ ತೆರಿಗೆ ಕಟ್ತೀವಿ,ವಾಪಸ್ ಬರೋದು 1 ರೂ.ಗೆ 14 ಪೈಸೆ ಮಾತ್ರ:** ದೇಶದಲ್ಲಿ ತಲಾ ಆದಾಯದಲ್ಲಿ ರಾಜ್ಯ ನಂಬರ್-1 ಸ್ಥಾನದಲ್ಲಿದೆ. ಜಿ.ಎಸ್.ಟಿ. ಸಂಗ್ರಹಣೆಯಲ್ಲಿ ದೇಶದಲ್ಲಿಯೇ ನಾವು ದ್ವಿತೀಯ ಸ್ಥಾನದಲ್ಲಿದ್ದೇವೆ. ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ಮೊದಲನೇ ಸ್ಥಾನದಲ್ಲಿದೆ. ವಾರ್ಷಿಕ ಸರಿ ಸುಮಾರು 4.50 ರಿಂದ 5 ಲಕ್ಷ ಕೋಟಿ ರೂ. ತೆರಿಗೆ ಕೇಂದ್ರ ಸರ್ಕಾರಕ್ಕೆ ನೀಡುತ್ತೇವೆ. ಆದರೆ ಇದರಲ್ಲಿ ನಮಗೆ ಬರೋದು ಒಂದು ರೂಪಾಯಿಗೆ ಕೇವಲ 14 ಪೈಸೆ ಮಾತ್ರ. ಉಳಿದಿದ್ದೆಲ್ಲ ಕೇಂದ್ರ ಸರಕಾರವೇ ಬಳಸಿಕೊಳ್ಳುತ್ತಿದೆ. ಇದು ಕೇಂದ್ರದಿಂದ ಮಾಡುತ್ತಿರುವ ಅನ್ಯಾಯ. ಇನ್ನು ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಹಿಂದೆಲ್ಲ ಕೇಂದ್ರ ಸರ್ಕಾರ ಶೇ.75 ಅನುದಾನ ನೀಡಿದರೆ ರಾಜ್ಯಗಳು ಶೇ.25 ಭರಿಸುತ್ತಿದ್ದವು. ಇದೀಗ ಈ ಅನುಪಾತ ಶೇ.60-40ಗೆ ಇಳಿಸಲಾಗಿದೆ. ಜಲ ಜೀವನ್ ಮಿಷನ್‌ದಲ್ಲಂತೂ 50-50 ಅನುಪಾತ ನಿಗದಿಪಡಿಸಿದೆ. ನಿಷ್ಠಾಗಿಯೂಕಳೆದ ಮೂರು ಆರ್ಥಿಕ ವರ್ಷದಲ್ಲಿ ಜೆ.ಜೆ.ಎಂ. ಯೋಜನೆಯಡಿ ರಾಜ್ಯಕ್ಕೆ ನೀಡಬೇಕಾದ 13,004 ಕೋಟಿ ರೂ. ಕೇಂದ್ರ ಬಾಕಿ ಇರಿಸಿಕೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

**ಅಸಮಾನತೆ ನಿವಾರಣೆಗೆ ಬಜೆಟ್‌ನಲ್ಲಿ ಹಣ ಮೀಸಲು:** ರಾಜ್ಯದಲ್ಲಿನ ಪ್ರಾದೇಶಿಕ ಅಸಮಾನತೆ ನಿವಾರಣೆ ನಿಟ್ಟಿನಲ್ಲಿ ರಚಿಸಲಾಗಿದ್ದ ಆರ್ಥಿಕ ತಜ್ಞ ಪ್ರೊ. ಗೋವಿಂರಾವ ನೇತೃತ್ವದ ಅಧ್ಯಯನ ಸಮಿತಿಯು ಈಗಾಗಲೆ ತನ್ನ ವರದಿ ನೀಡಿದ್ದು, ಸಮಿತಿಯ ಶಿಫಾರಸ್ಸಿನಂತೆ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ವಿಶೇಷವಾಗಿ ಉತ್ತರ ಕರ್ನಾಟಕ ಭಾಗಕ್ಕೆ ಬರುವಂತಹ 2026-27ನೇ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಮೀಸಲಿಡಲು ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು.
ಪತ್ರಿಕಾಗೋಷ್ಠಿಯಲ್ಲಿ ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಭೋಸರಾಜು, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಕರ್ನಾಟಕ ರಾಜ್ಯ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷೆ ಖನೀಜ್ ಫಾತಿಮಾ, ಶಾಸಕ ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಕಲಬುರಗಿ ಮಹಾನಗರ ಪಾಲಿಕೆಯ ಮಹಾಪೌರರಾದ ವರ್ಷಾ ರಾಜೀವ ಜಾನೇ ಇದ್ದರು.

## 1,051 ಕೋಟಿ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಜಾರಿ: ಪ್ರಿಯಾಂಕ್ ಖರ್ಗೆ

ತಾಲ್ಲೂಕಿನಲ್ಲಿ ಹಸರಗುಂಡಗಿ ಹಾಗೂ ಇತರೆ 6 ಗ್ರಾಮಗಳು ಮತ್ತು ಮಾರ್ಗ ಮಧ್ಯದ 5 ಗ್ರಾಮಗಳಲ್ಲಿ ಕಾಮಗಾರಿ ಪ್ರಗತಿಯ ಹಂತದಲ್ಲಿವೆ. 12 ಕೋಟಿ ವೆಚ್ಚದಲ್ಲಿ ಸೇಡಂ ತಾಲ್ಲೂಕಿನಲ್ಲಿ ಕಚೂರು ಗ್ರಾಮ ಮತ್ತು ಇತರೆ 9 ಗ್ರಾಮಗಳಲ್ಲಿ ಕಾಮಗಾರಿಗಳು ನಡೆಯುತ್ತಿವೆ. 15 ಕೋಟಿ ವೆಚ್ಚದಲ್ಲಿ ಚಿಂಚೋಳಿ ತಾಲ್ಲೂಕಿನಲ್ಲಿ ಸಲಗರ ಬಸಂತಪುರ ಹಾಗೂ ಇತರೆ 9 ಗ್ರಾಮಗಳಲ್ಲಿ ಕಾರ್ಯ ಪ್ರಗತಿಯಲ್ಲಿ.
260 ಕೋಟಿ ವೆಚ್ಚದಲ್ಲಿ ಕಾಳಗಿ, ಚಿತ್ತಾಪುರ, ಚಿಂಚೊಳ್ಳಿ ಮತ್ತು ಕಲಬುರಗಿಯಲ್ಲಿ ಡಿಬಿಒಟಿ ಯೋಜನೆಗೆ ಚಾಲನೆ ನೀಡಲಾಗಿದ್ದು, ಇದರಡಿ ಬೆಡಸೂರು ಮತ್ತು ಇತರೆ 95 ಜನವಸತಿ ಪ್ರದೇಶಗಳು ಹಾಗೂ ಕಾಳಗಿ ಪಟ್ಟಣದಲ್ಲಿ ಕಾಮಗಾರಿಗಳು ಸಾಗುತ್ತಿವೆ.
185 ಕೋಟಿ ವೆಚ್ಚದಲ್ಲಿ ಚಿತ್ತಾಪುರ ತಾಲ್ಲೂಕಿನಲ್ಲಿ ಡಿಬಿಒಟಿ ಕಾಮಗಾರಿಗಳು ಸನ್ನತಿ ಮತ್ತು ಇತರೆ 75 ಜನವಸತಿ ಪ್ರದೇಶಗಳು, ಕಲಬುರಗಿ ತಾಲೂಕಿನ ಕುಸ್ನೂರು ಮತ್ತು ಇತರೆ ಗ್ರಾಮಗಳಲ್ಲಿ ನಡೆಯುತ್ತಿವೆ.
36 ಕೋಟಿ ವೆಚ್ಚದಲ್ಲಿ ಆಳಂದ ತಾಲ್ಲೂಕಿನ ಕೊರಳ್ಳಿ ಹಾಗೂ ಇತರೆ 4 ಗ್ರಾಮಗಳ 9 ಜನವಸತಿ ಪ್ರದೇಶಗಳು, ಮಾರ್ಗ ಮಧ್ಯದ 5 ಜನವಸತಿ ಪ್ರದೇಶಗಳಲ್ಲಿ ಕಾಮಗಾರಿಗಳು ನಡೆಯುತ್ತಿವೆ.
85 ಕೋಟಿ ವೆಚ್ಚದಲ್ಲಿ ಕಲಬುರಗಿ ತಾಲ್ಲೂಕಿನ ಫರಹತಾಬಾದ್ ಹಾಗೂ ಇತರೆ 8 ಗ್ರಾಮಗಳ 22 ಜನವಸತಿಗಳು ಮತ್ತು ಮಾರ್ಗ ಮಧ್ಯದ 2 ಜನವಸತಿ ಪ್ರದೇಶಗಳಲ್ಲಿ ಕಾಮಗಾರಿಗಳು ನಡೆಯುತ್ತಿವೆ.
265 ಕೋಟಿ ವೆಚ್ಚದಲ್ಲಿ ಜೇವರ್ಗಿ ತಾಲ್ಲೂಕಿನ 22 ಗ್ರಾಮಗಳ 33 ಜನವಸತಿಗಳು, ಯಡ್ರಾಮಿ ತಾಲ್ಲೂಕಿನ ಆಲೂರು ಹಾಗೂ ಇತರೆ 58 ಗ್ರಾಮಗಳ 66 ಜನವಸತಿ ಪ್ರದೇಶಗಳಲ್ಲಿ ಕಾಮಗಾರಿಗಳು ನಡೆಯುತ್ತಿವೆ.
27 ಕೋಟಿ ವೆಚ್ಚದಲ್ಲಿ ಜೇವರ್ಗಿ ತಾಲೂಕಿನ ಕೂಡಿ ಮತ್ತು ಇತರೆ 11 ಗ್ರಾಮಗಳಲ್ಲಿ ಯೋಜನೆ ಪ್ರಗತಿಯಲ್ಲಿದೆ.
71.5 ಕೋಟಿ ವೆಚ್ಚದಲ್ಲಿ ಆಳಂದ, ಕಮಲಾಪುರ ತಾಲ್ಲೂಕಿನಲ್ಲಿ ವಿಕೆ ಸಲಗರ್ ಹಾಗೂ ಇತರೆ 16 ಗ್ರಾಮಗಳ 23 ಜನವಸತಿ ಪ್ರದೇಶಗಳಲ್ಲಿ ಕಾಮಗಾರಿಗಳು ನಡೆಯುತ್ತಿವೆ.
79 ಕೋಟಿ ವೆಚ್ಚದಲ್ಲಿ ಜೇವರ್ಗಿ ತಾಲ್ಲೂಕಿನ ಯಾಳವಾರ ಹಾಗೂ ಇತರೆ 20 ಗ್ರಾಮಗಳಲ್ಲಿನ 24 ಜನವಸತಿ ಪ್ರದೇಶಗಳಲ್ಲಿ ಕಾಮಗಾರಿಗಳು ಪ್ರಗತಿಯ ಹಂತದಲ್ಲಿವೆ.
ಈ ಎಲ್ಲ ಯೋಜನೆಗಳಿಗಾಗಿ ಈಗಾಗಲೇ ಒಟ್ಟು 887.81 ಕೋಟಿ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಜಿಲ್ಲೆಯ ಜನತೆಗೆ ಶುದ್ಧ ಜೀವಜಲ ನಿರಂತರವಾಗಿ ಲಭಿಸುವಂತೆ ಮಾಡುವುದರೊಂದಿಗೆ ಶಾಶ್ವತ ಪರಿಹಾರ ಕಲ್ಪಿಸುವುದು ಮತ್ತು ಭವಿಷ್ಯದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಗಮನಹರಿಸುವುದು ನನ್ನ ಆದ್ಯತೆಯಾಗಿದೆ ಎಂದು ಸಚಿವರು ವಿವರಿಸಿದ್ದಾರೆ.

## ಮಹಿಳೆ ಬಾಯಿಗೆ ಬಟ್ಟೆ ತುರುಕಿ ಚಿನ್ನಾಭರಣ ಸುಲಿಗೆ

**ಕರಜಗಿ,ಫೆ.1**-ಮನೆಯಲ್ಲಿದ್ದ ಒಂಟಿ ಮಹಿಳೆಯ ಬಾಯಿಗೆ ಬಟ್ಟೆ ತುರುಕಿ 2 ತೊಲೆ ಚಿನ್ನಾಭರಣ ದೋಚಿಕೊಂಡು ಹೋಗಿರುವ ಘಟನೆ ಕರಜಗಿ ಗ್ರಾಮದಲ್ಲಿ ಶನಿವಾರ ರಾತ್ರಿ 9.30ರ ಸುಮಾರಿಗೆ ನಡೆದಿದೆ.
ಮಗಳ ಮದುವೆಗಾಗಿ ಮಹಿಳೆ ಬಂಗಾರ ಸಂಗ್ರಹಿಸಿ ಇಟ್ಟಿದ್ದರು. ಕಳ್ಳರು ರಾತ್ರಿ ವೇಳೆ ಮನೆಯೊಳಗೆ ನುಗ್ಗಿ ಮಹಿಳೆಯ ಬಾಯಿಗೆ ಬಟ್ಟೆ ತುರುಕಿ ಚಿರಾಡದಂತೆ ಮಾಡಿ ಚಿನ್ನಾಭರಣ ದೋಚಿಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ.




ಈ ಕಳವು ಪ್ರಕರಣ ಗ್ರಾಮದಲ್ಲಿ ಭಯದ ವಾತಾವರಣ ಸೃಷ್ಟಿಸಿದೆ. ಸುದ್ದಿ ತಿಳದು ಸಿಪಿಐ ಚನ್ನಯ್ಯ ಹಿರೇಮಠ, ಪಿಎಸ್‌ಐ ಸೋಮಲಿಂಗ ಒಡೆಯರ್, ಶ್ವಾನದಳ ಮತ್ತು ಬೆರಳಚ್ಚು ತಜ್ಞರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಬಜೆಟ್‌ನಲ್ಲಿ ಕರ್ತವ್ಯ ಮಂತ್ರ ಪಠಣೆ

**ನವದೆಹಲಿ, ಫೆ. 1**- ದೇಶದ ಎಲ್ಲಾ ವರ್ಗಗಳ ಅಭಿವೃದ್ಧಿಯ ಬಜೆಟ್‌ನ್ನು ಮಂಡಿಸಿರುವ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಆರ್ಥಿಕ ಪ್ರಗತಿ, ಜನರ ನಿರೀಕ್ಷೆ ಈಡೇರಿಕೆ, ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಈ ಮೂರು ಕರ್ತವ್ಯಗಳನ್ನು ಬಜೆಟ್‌ನಲ್ಲಿ ಪಠಿಸಿದ್ದಾರೆ.



ಲೋಕಸಭೆಯಲ್ಲಿಂದು ದಾಖಲೆಯ 9ನೇ ಬಜೆಟ್‌ನ್ನು ಮಂಡಿಸಿದ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ಅವರು, ಸರ್ವ ವರ್ಗಗಳ ಅಭಿವೃದ್ಧಿಯ ಜತೆ ಜತೆಗೆ ಕೈಗಾರಿಕಾ ಬೆಳವಣಿಗೆ, ಮೂಲ ಸೌಕರ್ಯಕ್ಕೆ ಒತ್ತು ನೀಡುವ, ಉತ್ಪಾದಕ ವಲಯದ ಬೆಳವಣಿಗೆಗೆ ಪೂರಕವಾಗಿ ಜತೆಗೆ ಯುವ ಜನರನ್ನು ಸಬಲೀಕರಣ, ರೈತರು, ಮಹಿಳೆಯರ ಬಲಿಷ್ಠಗೊಳಿಸುವ ಹತ್ತು ಹಲವು ಯೋಜನೆಗಳನ್ನು ಪ್ರಕಟಿಸಿದ್ದಾರೆ.

ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ಅವರು ಈ ಬಜೆಟ್‌ನಲ್ಲಿ 5 ಪ್ರಮುಖ ಘಟಕಗಳ ಸಮಗ್ರ ಯೋಜನೆಯನ್ನು ಪ್ರಕಟಿಸಿದ್ದು, ಕಾರ್ಮಿಕ, ಜವಳಿ ವಲಯ ಉತ್ತೇಜಿಸಲು ಹೊಸ ಯೋಜನೆ, ರಾಷ್ಟ್ರೀಯ ನಾರು ಯೋಜನೆ, ಜವಳಿ ವಿಸ್ತರಣೆ ಮತ್ತು ಉದ್ಯೋಗ ಯೋಜನೆ, ಖಾದಿ ಮತ್ತು ಕರಕುಶಲ ವಸ್ತುಗಳಿಗಾಗಿ ಹೊಸ ಯೋಜನೆ, ಮಹಾತ್ಮಗಾಂಧಿ ಗ್ರಾಮ ಸ್ವರಾಜ್ ಯೋಜನೆ, ರಾಷ್ಟ್ರೀಯ ಕೈಮಗ್ಗ ಮತ್ತು ಕರಕುಶಲ ಕಾರ್ಯಕ್ರಮವನ್ನು ಬಜೆಟ್‌ನಲ್ಲಿ ಪ್ರಕಟಿಸಿದ್ದಾರೆ.

ಕೇಂದ್ರ ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ಅವರು ಭಾರತದ ಅಭಿವೃದ್ಧಿಗೆ 6 ವಲಯಗಳ ಪ್ರಗತಿಯನ್ನು ಪ್ರತಿಪಾದಿಸಿದ್ದು, ಉತ್ಪಾದನಾ ವಲಯದ ಬಲಪಡಿಸುವಿಕೆ, ಕೈಗಾರಿಕಾ ವೈಭವದ ಪುನರುಜ್ಜೀವನ, ಚಾಂಪಿಯನ್ ಎಂಎಸ್‌ಎಂಇ ಸೃಷ್ಠಿ, ಮೂಲಭೂತ ಸೌಕರ್ಯಗಳಿಗೆ ಒತ್ತು, ದೀರ್ಘಕಾಲದ ಬದ್ಧತೆ ಮತ್ತು ಸ್ಥಿರತೆಗೆ ಆದ್ಯತೆ, ನಗರಗಳ ಆರ್ಥಿಕ ಅಭಿವೃದ್ಧಿ ಹೀಗೆ 6 ವಲಯಗಳ ಅಭಿವೃದ್ಧಿಗೆ ತಮ್ಮ ಬಜೆಟ್‌ನಲ್ಲಿ ಒತ್ತು ನೀಡಿದ್ದಾರೆ.

ಬಜೆಟ್‌ನ ಆರಂಭದಲ್ಲೇ ಇದು ಯುವ ಶಕ್ತಿಯ ಬಜೆಟ್ ಹಾಗೂ ಬಡವರ ಕಲ್ಯಾಣ ಸಂಕಲ್ಪದ ಬಜೆಟ್ ಎಂದು ಹೇಳಿರುವ ಅವರು, ಈ ಸಂಕಲ್ಪವನ್ನು ನೆರವೇರಿಸಲು ಕರ್ತವ್ಯ ಭವನದಲ್ಲಿ ತಯಾರಿಸಲಾದ ಮೊದಲ ಬಜೆಟ್ ಮೂರು ಕರ್ತವ್ಯಗಳಿಂದ ಪ್ರೇರಿತಗೊಂಡಿದೆ ಎಂದಿದ್ದಾರೆ.
ಉತ್ಪಾದನೆ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವ ಮೂಲಕ ಜಾಗತಿಕ ಅನಿಶ್ಚಿತತೆಯ ಹೊರತಾಗಿಯೂ ಆರ್ಥಿಕ ಬೆಳವ

ಣಿಗೆಯನ್ನು ವೇಗಗೊಳಿಸುವುದು ಮತ್ತು ಉಳಿಸಿಕೊಳ್ಳುವುದು ನಮ್ಮ ಮೊದಲ ಕರ್ತವ್ಯವಾಗಿದೆ ಎಂದು ಹೇಳಿದ್ದಾರೆ.
ಜನರ ಆಶೋತ್ತರಗಳನ್ನು ಈಡೇರಿಸುವುದು ಮತ್ತು ದೇಶದ ಅಭಿವೃದ್ಧಿಯಲ್ಲಿ ಬಲಿಷ್ಠ ಪಾಲುದಾರರಾಗುವಂತೆ ಅವರ ಸಾಮರ್ಥ್ಯವನ್ನು ಹೆಚ್ಚಿಸುವುದು ನಮ್ಮ 2ನೇ ಕರ್ತವ್ಯ. ನಮ್ಮ ಮೂರನೇ ಕರ್ತವ್ಯ ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಆಧಾರಿತವಾಗಿದ್ದು, ಪ್ರತಿ ಕುಟುಂಬ, ಸಮುದಾಯ, ಧರ್ಮ ಹಾಗೂ ವಿಭಾಗಗಳಿಗೆ ಸಂಪನ್ಮೂಲ ಬಳಕೆಗೆ ಅವಕಾಶ ನೀಡುವುದಾಗಿದೆ ಎಂದು ಅವರು ಬಜೆಟ್ ಭಾಷಣದಲ್ಲಿ ಹೇಳಿದರು.

ಮಾಘಮಾಸದ ಹುಣ್ಣಿಮೆ ಹಾಗೂ ಗುರು ರವಿದಾಸ್ ಜನ್ಮದಿನದ ಪುಣ್ಯದಿನದಂದು ಕೇಂದ್ರದ ಬಜೆಟ್‌ನ್ನು ನಾನು ಮಂಡಿಸಿದ್ದೇನೆ. 12 ವರ್ಷಗಳಿಂದ ದೇಶದಲ್ಲಿ ಆರ್ಥಿಕ ಸ್ಥಿರತೆ ಸಾಧನೆಯಾಗಿದ್ದು, ಹಣಕಾಸು ಶಿಸ್ತು ಹಾಗೂ ನಿರಂತರ ಪ್ರಗತಿ ಸಾಧಿಸಿದ್ದೇವೆ. ಅನಿಶ್ಚಿತತೆಗಳ ನಡುವೆಯೂ ಪ್ರಗತಿ ಸಾಧಿಸಿದ್ದೇವೆ ಎಂದರು.
ಸರ್ವರ ಅಭಿವೃದ್ಧಿಯೊಂದಿಗೆ ವಿಕಸಿತ ಭಾರತದತ್ತ ಹೆಜ್ಜೆ ಇಡುವುದು ಮುಂದುವರೆಯಲಿದೆ ಎಂದು ಅವರು ಹೇಳಿದರು.

ಇಂದು ತಾವು ಮಂಡಿಸುತ್ತಿರುವ ಬಜೆಟ್ ಯುವಜನರ ಬಜೆಟ್ ಆಗಿದೆ. ಯುವ ಜನರಿಗೆ ಹೆಚ್ಚಿನ ಉದ್ಯೋಗ ಸೃಷ್ಟಿ ನಮ್ಮ ಬದ್ಧತೆಯಾಗಿದೆ ಎಂದು ಅವರು ತಿಳಿಸಿದರು.
ಈ ಬಜೆಟ್‌ನಲ್ಲಿ ರೈಲ್ವೆ ಅಭಿವೃದ್ಧಿಯ ಘೋಷಣೆಯನ್ನು ಮಾಡಿರುವ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬೆಂಗಳೂರು ಸೇರಿದಂತೆ 7 ಹೈಸ್ಪೀಡ್ ರೈಲುಗಳನ್ನು ಘೋಷಿಸಿದ್ದಾರೆ.

ಇಂಧನ, ಹಣಕಾಸು ನಿಗಮ ಹಾಗೂ ಗ್ರಾಮೀಣ ವಿದ್ಯುದ್ದೀಕರಣ ಪುನಾರಚನೆಯ ಘೋಷಣೆಯನ್ನು ಮಾಡಿದ್ದು, ಮೆಡಿಕಲ್ ಹಬ್ ಘೋಷಣೆಯನ್ನು ಮಾಡಿದ್ದಾರೆ.

ದೇಶದಲ್ಲಿ ಮೆಗಾ ಜವಳಿ ಪಾರ್ಕ್ ಸ್ಥಾಪನೆಯ ಪ್ರಸ್ತಾವವನ್ನು ಅವರು ಮಾಡಿದ್ದು, 200 ಪ್ರಮುಖ ಕೈಗಾರಿಕಾ ಕ್ಲಸ್ಟರ್‌ಗಳ ನವೀಕರಣ ಘೋಷಣೆಯನ್ನು ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಮಾಡಿದ್ದಾರೆ.
ಭಾರತವನ್ನು ಜಾಗತಿಕ ಬಯೋ ಫಾರ್ಮ ಉತ್ಪಾದನಾ ಕೇಂದ್ರವನ್ನಾಗಿ ಮಾರ್ಪಡಿಸಲಾಗುವುದು. ಅದಕ್ಕಾಗಿ ಮುಂದಿನ 5 ವರ್ಷದಲ್ಲಿ 10 ಸಾವಿರ ಕೋಟಿ ರೂ. ಬಯೋ ಫಾರ್ಮ ಶಕ್ತಿ ಯೋಜನೆಯನ್ನು ಅವರು ಬಜೆಟ್‌ನಲ್ಲಿ ಪ್ರಸ್ತಾಪಿಸಿದ್ದಾರೆ.

ವೈಯುಕ್ತಿಕ ಆದಾಯ ತೆರಿಗೆಯಲ್ಲಿ ಈ ಬಜೆಟ್‌ನಲ್ಲಿ ಯಾವುದೇ ಬದಲಾವಣೆಗಳನ್ನು ಮಾಡಿಲ್ಲ. ವಿದೇಶ ಪ್ರವಾಸ, ವಿದೇಶದಲ್ಲಿ ಶಿಕ್ಷಣ, ಚಿಕಿತ್ಸೆ ಹಗ್ಗವಾಗಲಿದೆ.
ಈ ಬಜೆಟ್‌ನಲ್ಲಿ ಮಹಿಳೆಯರ ಸಬಲೀಕರಣಕ್ಕೂ ಒತ್ತು ನೀಡಲಾಗಿದ್ದು, ದೇಶದ ಪ್ರತಿ ಜಿಲ್ಲೆಯಲ್ಲಿ ಬಾಲಕಿಯರ ಹಾಸ್ಟೆಲ್ ಸ್ಥಾಪನೆಯ ಘೋಷಣೆ ಮಾಡಲಾಗಿದೆ.
ರಕ್ಷಣಾ ವಲಯಕ್ಕೂ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಒದಗಿಸಲಾಗಿದೆ.

ಈ ಬಜೆಟ್‌ನಲ್ಲಿ ಚರ್ಮದ ಆಮದು ಸುಂಕ ಇಳಿಕೆ ಮಾಡಲಾಗಿದ್ದು, ಪಾದರಕ್ಷಣೆಗಳು ಹಾಗೂ ಚರ್ಮದ ಉತ್ಪನ್ನಗಳ ಬೆಲೆ ಇಳಿಕೆಯಾಗಲಿದೆ. ಹಾಗೆಯೇ ಕ್ಯಾನ್ಸರ್ ಔಷಧಿಗಳಿಗೂ ಶುಲ್ಕ ವಿನಾಯ್ತಿ ಘೋಷಿಸಲಾಗಿದೆ.

ವೈಯುಕ್ತಿಕ ಬಳಕೆಗೆ ಆಮದು ಮಾಡಿಕೊಳ್ಳುವ ಸರಕುಗಳ ಮೇಲಿನ ಸುಂಕವನ್ನು ಶೇ. 20 ರಿಂದ 10ಕ್ಕೆ ಇಳಿಸಲಾಗಿದೆ.

ಮೇಕಿನ್ ಇಂಡಿಯಾ ಅಡಿ ತಯಾರಾಗುವ ಎಲೆಕ್ಟ್ರಾನಿಕ್ ಟ್ಯಾಬ್ಲೆಟ್ ಮತ್ತು ಸ್ಮಾರ್ಟ್ ಫೋನ್‌ಗಳು ಹಗ್ಗವಾಗಲಿವೆ. ಬೀಡಿ ಮತ್ತು ಬ್ಯಾಟರಿಗಳ ಬೆಲೆಯೂ ಇಳಿಕೆಯಾಗಲಿದೆ. ಸಿಗರೇಟ್, ಪಾನ ಮಸಾಲ, ವಿದೇಶದಿಂದ ಆಮದು ಆಗುವ ಮದ್ಯ, ಲಕ್ಸುರಿ ವಾಚ್‌ಗಳು ಮತ್ತು ವಿಮಾನ ಬಿಡಿ ಭಾಗಗಳ ಮೇಲಿನ ಶುಲ್ಕ ಹೆಚ್ಚಳ ಮಾಡಿದ್ದು, ಇವುಗಳ ಬೆಲೆ ಏರಿಕೆಯಾಗಲಿದೆ.

ಲೋಕಸಭೆಯಲ್ಲಿ ಬಜೆಟ್ ಭಾಷಣವನ್ನು ಓದಲು ನಿರ್ಮಲ ಸೀತಾರಾಮನ್ ಅವರು 1 ಗಂಟೆ 25 ನಿಮಿಷ ತೆಗೆದುಕೊಂಡರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ 15ನೇ ಬಜೆಟ್ ಇದಾಗಿದ್ದು, ನಿರ್ಮಲಾ ಸೀತರಾಮನ್ ಅವರು ಸತತವಾಗಿ ಮಂಡಿಸಿದ 9ನೇ ಬಜೆಟ್ ಇದಾಗಿದೆ.

ಹಣಕಾಸು ಕೊರತೆ ಶೇ. 4.43 ರಷ್ಟು
2025-26ರ ಪರಿಷ್ಕೃತ ಅಂದಾಜಿನಲ್ಲಿ ಹಣಕಾಸಿನ ಕೊರತೆಯೂ ಜಿಡಿಪಿಯ ಶೇ. 4.44 ರಷ್ಟಿದೆ. 2026-27ಕ್ಕೆ ಇದನ್ನು ಶೇ. 4.43ಕ್ಕಿಂತ ಕಡಿಮೆ ಮಾಡುವ ಗುರಿಯನ್ನು ನಿರ್ಮಲಾ ಸೀತರಾಮನ್ ಅವರು ಬಜೆಟ್‌ನಲ್ಲಿ ಪ್ರಕಟಿಸಿದ್ದಾರೆ.
16ನೇ ಹಣಕಾಸು ಆಯೋಗದ ಶಿಫಾರಸ್ಸುಗಳನ್ನು ಸರ್ಕಾರ ಒಪ್ಪಿಕೊಂಡಿದೆ ಎಂದ ಪ್ರಕಟಿಸಿರುವ ಅವರು, ಶೇ. 41 ರಷ್ಟು ತೆರಿಗೆ ವಿಕೇಂದ್ರೀಕರಣ ಸೂತ್ರವನ್ನು ಉಳಿಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.ಕಳೆದ 10 ವರ್ಷಗಳಲ್ಲಿ ಸುಮಾರು 25 ಕೋಟಿ ಜನ ಬಡತನದಿಂದ ಹೊರ ಬಂದಿದ್ದಾರೆ ಎಂದು ಅವರು ಬಜೆಟ್ ಭಾಷಣದಲ್ಲಿ ತಿಳಿಸಿದ್ದಾರೆ.

## ಬೆಂಗಳೂರು ಸೇರಿ 7 ಹೈಸ್ಪೀಡ್ ರೈಲು

**ನವದೆಹಲಿ,ಫೆ.1**- ಬೆಂಗಳೂರು- ಚೆನ್ನೈ, ಬೆಂಗಳೂರು-ಹೈದರಾಬಾದ್ ಸೇರಿದಂತೆ ದೇಶದಲ್ಲಿ 7 ಹೈಸ್ಪೀಡ್ ರೈಲು ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಲಾಗುವುದು ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಪ್ರಕಟಿಸಿದ್ದಾರೆ.
ಪ್ರಸ್ತಾವಿತ ಮಾರ್ಗಗಳಲ್ಲಿ ಮುಂಬೈ-ಪುಣೆ, ಪುಣೆ-ಹೈದರಾಬಾದ್, ಹೈದರಾಬಾದ್-ಬೆಂಗಳೂರು, ಹೈದರಾಬಾದ್-ಚೆನ್ನೈ, ಚೆನ್ನೈ-ಬೆಂಗಳೂರು, ದೆಹಲಿ-ವಾರಣಾಸಿ ಮತ್ತು ವಾರಣಾಸಿ-ಸಿಲಿಗುರಿ ಸೇರಿವೆ.



2025-27 ನೇ ಸಾಲಿನ ಮುಂಗಡ ಪತ್ರ ಮಂಡಿಸಿದ ಅವರು 7 ಹೈಸ್ಪೀಡ್ ರೈಲು ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸಲಿದೆ. ಇದರಿಂದ ದೇಶದಲ್ಲಿ ಸಂಕರ್ಪ ಸುಧಾರಣೆಗೆ ಸಹಕಾರಿಯಾಗಲಿದೆ ಎಂದಿದ್ದಾರೆ.
ಅಭಿವೃದ್ಧಿ ಹೊಂದುತ್ತಿರುವ ನಗರಗಳನ್ನು ಸಂಪರ್ಕಿಸಲು ಏಳು ಹೈಸ್ಪೀಡ್ ರೈಲು ಕಾರಿಡಾರ್‌ಗಳನ್ನು ಪ್ರಸ್ತಾಪಿಸಿದ್ದು
ಪ್ರಮುಖ ನಗರ ಮತ್ತು ಆರ್ಥಿಕ ಕೇಂದ್ರಗಳಲ್ಲಿ ಏಳು ಹೈ-ಸ್ಪೀಡ್ ರೈಲು ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆಯೊಂದಿಗೆ ಪರಿಸರ ಸ್ನೇಹಿ ಪ್ರಯಾಣಿಕ ಸಾರಿಗೆಗೆ ಪ್ರಮುಖ ಒತ್ತು ನೀಡಲಾಗಿದೆ ಎಂದಿದ್ದಾರೆ.
ಈ ಕಾರಿಡಾರ್‌ಗಳು ಸಂಪರ್ಕ ಸೇತುವಾಗಿ ಕಾರ್ಯನಿರ್ವಹಿಸುತ್ತವೆ, ಪ್ರಯಾಣದ ಸಮಯವನ್ನು ಕಡಿತಗೊಳಿಸುತ್ತವೆ, ಹೊರಸೂಸುವಿಕೆಯನ್ನು ಕಡಿಮೆ ಮಾಡುತ್ತವೆ ಎಂದಿದ್ದಾರೆ

ಒಟ್ಟಾಗಿ, ಅವು ಭಾರತದ ಹಣಕಾಸು ಕೇಂದ್ರಗಳು, ತಂತ್ರಜ್ಞಾನ ಕೇಂದ್ರಗಳು, ಉತ್ಪಾದನಾ ಸಮೂಹಗಳು ಮತ್ತು ಉದಯೋನ್ಮುಖ ನಗರಗಳನ್ನು ವೇಗವಾದ ಮತ್ತು ಸ್ವಚ್ಛ ಚಲನಶೀಲತೆಯೊಂದಿಗೆ ಸಂಪರ್ಕಿಸುತ್ತವೆ.

"ಪರಿಸರ ಸುಸ್ಥಿರ ಪ್ರಯಾಣಿಕ ವ್ಯವಸ್ಥೆಗಳನ್ನು ಉತ್ತೇಜಿಸುವ ಸಲುವಾಗಿ, ನಾವು ನಗರಗಳ ನಡುವೆ ಏಳು ಹೈಸ್ಪೀಡ್ ರೈಲು ಕಾರಿಡಾರ್‌ಗಳನ್ನು ಬೆಳವಣಿಗೆಯ ಸಂಪರ್ಕಗಳಾಗಿ ಅಭಿವೃದ್ಧಿಪಡಿಸಲು ಸಹಕಾರಿಯಾಗಲಿವೆ ಎಂದಿದ್ದಾರೆ.
ಮುಂಬೈ ನಿಂದ ಪುಣೆ, ಪುಣೆ ನಿಂದ ಹೈದರಾಬಾದ್, ಹೈದರಾಬಾದ್ ನಿಂದ ಬೆಂಗಳೂರು, ಹೈದರಾಬಾದ್ ನಿಂದ ಚೆನ್ನೈ, ಚೆನ್ನೈ ನಿಂದ ಬೆಂಗಳೂರು. ದೆಹಲಿಯಿಂದ ವಾರಣಾಸಿ, ವಾರಣಾಸಿ ನಿಂದ ಸಿಲಿಗುರಿ" ಎಂದು ಹೇಳಿದ್ದಾರೆ.

# ಭಾರತ ಸ್ವಾತಂತ್ರ್ಯ ಹೋರಾಟದ ದಿಟ್ಟ ಮಹಿಳೆ... ಶಾಂತಿ ಸುಧಾ ಘೋಷ್

ಭಾರತದ ಇತಿಹಾಸವನ್ನು ಪುನರ್ ನಿರ್ಮಿಸಿದ ಕೆಲವೇ ಜನರಲ್ಲಿ ಶಾಂತಿ ಸುಧಾ ಘೋಷ್ ಕೂಡ ಒಬ್ಬರು. ಭಾರತವು ಬ್ರಿಟಿಷ್ ವಸಾಹತುಶಾಹಿಯ ಅಧಿಕಾರದ ಅಡಿಯಲ್ಲಿ ನರಳುತ್ತಿರುವಾಗ ಅವಿಭಜಿತ ಬಂಗಾಳದ ಬಾರಿಸಾಲ್ ಎಂಬ ಊರಿನಲ್ಲಿ ಜನಿಸಿದ ಹಾಗೂ ಅಲ್ಲಿಯೇ ಬೆಳೆದರು. ಅತ್ಯಂತ ಸಾಮಾನ್ಯ ಬದುಕನ್ನು ಬದುಕಿದ ಅವರು ಮೌನ ಮತ್ತು ಸ್ಥೈರಣೆಯನ್ನು ಅಪ್ಪಿಕೊಳ್ಳಲಿಲ್ಲ. ಅಂದಿನ ಕಾಲದಲ್ಲಿಯೇ ಅತ್ಯಂತ ಸುಶಿಕ್ಷಿತ ಬಂಗಾಳ ಪ್ರಾಂತ್ಯದಲ್ಲಿ ಜನಿಸಿದ ಶಾಂತಿ ಸುಧಾ ಅವರು ಉನ್ನತ ಶಿಕ್ಷಣವನ್ನು ಪಡೆದರು. ಧೈರ್ಯವನ್ನು ತಮ್ಮ ಆಯುಧದಂತೆ ಧರಿಸಿ ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಿದರು.

ಶಾಂತಿ ಸುಧಾ ಘೋಷ್ ಅವರ ತಂದೆ ಕ್ಷೇತ್ರನಾಥ ಘೋಷ್ ಅವರು ಅಲೋಕಾನಂದ ಎಂಬ ಹಳ್ಳಿಯ ಬ್ರಜಮೋಹನ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದರು. ಇದೀಗ ಈ ಬಾರಿಶಾಲ ಪ್ರಾಂತವು ಇಂದಿನ ಬಂಗಾಳ ದೇಶದಲ್ಲಿ ವಿಲೀನವಾಗಿದೆ.

ಪ್ರಾಥಮಿಕ ವಿದ್ಯಾಭ್ಯಾಸವನ್ನು ಬ್ರಹ್ಮೋ ಬಾಲಿಕ ವಿದ್ಯಾಲಯದಲ್ಲಿ ಪಡೆದ ಆಕೆ ಮುಂದೆ 1928ರಲ್ಲಿ ಬಿಎ ಪದವಿಯನ್ನು ಪಡೆದರು. ನಂತರ 1930ರಲ್ಲಿ ಕಲ್ಕತ್ತಾ ಯುನಿವರ್ಸಿಟಿಯಿಂದ ಗಣಿತ ವಿಷಯದಲ್ಲಿ ಮೊದಲ ಸ್ಥಾನದಲ್ಲಿ ತೇರ್ಗಡೆಯಾಗಿ ಎಮ್ ಎ ಪದವಿಯನ್ನು ಪಡೆದರು. ಆಕೆಯ ಸಹೋದರ ಪ್ರಖ್ಯಾತ ಕಮ್ಯುನಿಸ್ಟ್ ಚಿಂತಕ ಹಾಗೂ ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ ಸಂಸ್ಥಾಪಕರಾದ ದೇವಪ್ರಸಾದ್ ಘೋಷ್ ಆಗಿದ್ದರೂ ಕೂಡ ಆಕೆ ತನ್ನ ಮುಂದಿನ ಬದುಕಿನಲ್ಲಿ ರಾಜಕೀಯದ ಹಾದಿಯನ್ನು ತುಳಿಯಲಿಲ್ಲ.

ಅರವಿಂದ ಘೋಷರ ಅಭಿಮಾನಿಯಾಗಿದ್ದ ಆಕೆ ರಾಜಕೀಯ ಕ್ರಾಂತಿ ಹಾಗೂ ಯೋಗದ ಅನೂಹ್ಯ ಬಂಧವನ್ನು ಹೊಂದಿದ್ದರು. ಗಾಂಧೀಜಿಯವರ ಕುರಿತು ಆಕೆಗೆ ಅಪಾರ ಗೌರವವಿದ್ದರೂ ಕೂಡ ಅವರ ಅಹಿಂಸಾ ಪರ ನಿಲುವುಗಳಿಗೆ ಆಕೆಯ ವಿರೋಧವಿತ್ತು.

ಮಹಿಳೆಯರು ಸಂಪ್ರದಾಯದ ಸಂಕೋಲೆಯಲ್ಲಿ ಬಂಧಿಸಿದಂತಹ ಸಮಯದಲ್ಲಿ ಅತ್ಯಂತ ಧೈರ್ಯದಿಂದ ಆ ಎಲ್ಲಾ ಸಂಕೋಲೆಗಳನ್ನು ದಾಟಿ ಕಲ್ಕತ್ತಾ ವಿಶ್ವವಿದ್ಯಾಲಯದಲ್ಲಿ ಶಿಕ್ಷಣವನ್ನು ಪಡೆದು ಓರ್ವ ಟೀಚರ್ ಆಗಿ ಆಕೆ ಕಾರ್ಯನಿರ್ವಹಿಸಿದರು. ಜನರ ವಿಸ್ಮೃತಿಯನ್ನು ತೊಡೆದು ಹಾಕಲು ಹಾಗೂ ಅವರನ್ನು ಎಚ್ಚರಿಸಲು ಶಿಕ್ಷಣ ಹಾಗೂ ಜ್ಞಾನಗಳು ಅತ್ಯವಶ್ಯಕ ಎಂದು ಆಕೆ ನಂಬಿದ್ದರು. ಆಕೆಯ ತರಗತಿಯ ಕೋಣೆಗಳು ಕೇವಲ ಕಲಿಕಾ ತಾಣಗಳಾಗಿರಲಿಲ್ಲ ಬದಲಾಗಿ ವಿದ್ಯಾರ್ಥಿಗಳಲ್ಲಿ ವಿಚಾರ ಪ್ರಚೋದನೆಯನ್ನು ಮೂಡಿಸುವಂತಹ, ಸ್ವತಂತ್ರ ವಿಚಾರಧಾರೆಗಳನ್ನು ಹೊಂದುವಂತಹ ಹಾಗೂ ಅನ್ಯಾಯದ ವಿರುದ್ಧ ಮಾತನಾಡುವ ಧೈರ್ಯವನ್ನು ತುಂಬುವಂತಹ ಸ್ಪೂರ್ತಿಯ ತಾಣಗಳಾಗಿದ್ದವು. ಶಿಕ್ಷಣ ಆಕೆಗೆ ಕೇವಲ ವೃತ್ತಿ ಆಗಿರದೆ ಅದೊಂದು ಗುರಿಯಾಗಿತ್ತು

ಶೈಕ್ಷಣಿಕ ಚಟುವಟಿಕೆಗಳ ಹೊರತಾಗಿ ಭಾರತದ ಕುರಿತಾದ ಆಕೆಯ ಪ್ರೀತಿ ಹಾಗೂ ಗೌರವಗಳು ಆಕೆ ಸ್ವಾತಂತ್ರ್ಯ ಹೋರಾಟದ ಚಳುವಳಿಯಲ್ಲಿ ಭಾಗವಹಿಸಲು ಕಾರಣವಾದವು. ಕ್ರಾಂತಿಕಾರಿಗಳೊಂದಿಗೆ ಸಂಪರ್ಕವನ್ನು ಹೊಂದಿ ಸ್ವಾತಂತ್ರ್ಯ ಹೋರಾಟದ ಭೂಗತ ಚಟುವಟಿಕೆಗಳನ್ನು ನಡೆಸಲು ಆಕೆ ಆರಂಭಿಸಿದರು. ಹಾಗೆ ಶಾಂತಿ ಸುಧಾ ಅವರು ಆಯ್ದುಕೊಂಡ ದಾರಿ ಅತ್ಯಂತ ಅಪಾಯಕಾರಿ ಹಾಗೂ ವೈಯುಕ್ತಿಕ ತ್ಯಾಗವನ್ನು ಬಯಸುತ್ತದೆ ಎಂಬ ಅರಿವಿದ್ದು ಕೂಡ ಆಕೆ ಈ ದಾರಿಯನ್ನು ಆಯ್ದುಕೊಂಡದ್ದು ಆಕೆಯ ಧೀಶಕ್ತಿಯನ್ನು ನಮಗೆ ಪರಿಚಯಿಸುತ್ತದೆ.

ಪ್ರಾಥಮಿಕವಾಗಿ ಕ್ರಾಂತಿಕಾರಿಗಳ ಸಹಯೋಗಿಯಾಗಿದ್ದು ಸತಿನ್ ಸೇನ್ ತರುಣ ಸಂಘವನ್ನು ಆಕೆ ಪ್ರತಿನಿಧಿಸುತ್ತಿದ್ದರೂ ತನ್ನದೇ ಆದ ಶಕ್ತಿ ವಾಹಿನಿ ಎಂಬ ಹೆಣ್ಣು ಮಕ್ಕಳ ಸಂಘವನ್ನು ಕೂಡ 1930ರಲ್ಲಿ ಆಕೆ ಬಾರಿಶಾಲ್ ನಲ್ಲಿ ಆರಂಭಿಸಿದಳು. ಕ್ರಾಂತಿಕಾರಕ ಚಟುವಟಿಕೆಗಳಿಗೆ ಹೆಚ್ಚುವರಿ ಸಹಾಯಕರಾಗಿ ಹೆಣ್ಣು ಮಕ್ಕಳನ್ನು ತಯಾರಿಸಿದ ಖ್ಯಾತಿ ಶಾಂತಿ ಸುಧಾ ಅವರದು .

ಪ್ರೀಮಿಯರ್ ಕಾಲೇಜುಗಳು ಎಂದೇ ಹೆಸರಾದ ವಿಕ್ಟೋರಿಯಾ ಎಕ್ಸಿಕ್ಯೂಷನ್ ಕಲ್ಕತ್ತಾ ಮೊಹಮ್ಮದ್ ಮುಹಸಿನ್ ಕಾಲೇಜು ಹಾಗೂ ಬಾರಿಶಾಲ್ ಬ್ರಜಮೋಹನ್ ಕಾಲೇಜುಗಳಲ್ಲಿ ಶಿಕ್ಷಕಿಯಾಗಿ ಆಕೆ ಕಾರ್ಯನಿರ್ವಹಿಸುತ್ತಿದ್ದರೂ ಕೂಡ ಆಕೆಯನ್ನು ಎಲ್ಲರೂ



ಕ್ರಾಂತಿಕಾರಿಗಳ ಸಹಯೋಗಿ ಎಂದೇ ಗುರುತಿಸುತ್ತಿದ್ದರು. ಕ್ರಾಂತಿಕಾರಿಗಳಿಗೆ ಸಹಾಯವನ್ನು ಮಾಡುವ, ಸ್ವಾತಂತ್ರ್ಯ ಹೋರಾಟದ ಚಳುವಳಿಯಲ್ಲಿ ಭಾಗವಹಿಸಿದ್ದ ಆಕೆ 1934 ರಲ್ಲಿ ಬಂಧನಕ್ಕೆ ಒಳಗಾಗಬೇಕಾಗಿತ್ತು. ಕಠಿಣಾತಿ ಕಠಿಣ ಕಾರಾಗೃಹ ಶಿಕ್ಷೆಯು ಆಕೆಯ ಆರೋಗ್ಯದಲ್ಲಿ ಸಾಕಷ್ಟು ತೊಂದರೆಗಳನ್ನು ಉಂಟು ಮಾಡಿದರೂ ಕೂಡ ಆಕೆಯ ಉತ್ಸಾಹ ಮಾತ್ರ ಒಂದಿನಿತೂ ಕಮರಲಿಲ್ಲ. ಕಠಿಣ ಕಾರಾಗೃಹ ವಾಸದ ತೊಂದರೆಗಳನ್ನು ಅನುಭವಿಸಿದರೂ ಕೂಡ ಭಾರತಕ್ಕೆ ಖಂಡಿತವಾಗಿಯೂ ಸ್ವಾತಂತ್ರ್ಯ ದೊರೆಯುತ್ತದೆ ಅದಕ್ಕಾಗಿ ಎಲ್ಲ ರೀತಿಯ ತ್ಯಾಗಕ್ಕೆ ಸಿದ್ಧರಾಗಲೇಬೇಕು ಎಂಬ ಆಕೆಯ ದೃಢನಂಬಿಕೆಯ ಮಹಾವೃಕ್ಷದ ಬೇರನ್ನು ಕಿಂಚಿತ್ತು ಅಲುಗಿಸಲು ಕೂಡ ಸಾಧ್ಯವಾಗಲಿಲ್ಲ. ಆಕೆ ಮತ್ತೆ ಸ್ವಾತಂತ್ರ್ಯ ಯಜ್ಞದಲ್ಲಿ ತನ್ನನ್ನು ತಾನು ಸಮಿತ್ತಾಗಿಸಿಕೊಂಡರು.

1942ರಲ್ಲಿ ನಡೆದ ಚಲೇ ಜಾವ್ ಚಳುವಳಿಯ ಸಮಯದಲ್ಲಿ ಆಕೆ ಮತ್ತೊಮ್ಮೆ ಬಂಧನಕ್ಕೆ ಒಳಗಾದರು. ಪ್ರತಿಯೊಂದು ಜೈಲುವಾಸವು ಆಕೆಯನ್ನು ಗಟ್ಟಿಗೊಳಿಸುತ್ತಿತ್ತು.ಹಾಗೆ ಜೈಲಿನಿಂದ ಹೊರಬಂದ ಆಕೆಯ ಮನಸ್ಸಿನಲ್ಲಿ ಯಾವುದೇ ಕಹಿ ಇರದೆ ದೇಶ ಸೇವೆಯ ಅಗಾಧ ಇಚ್ಛೆ ಆಕೆಯಲ್ಲಿ ಮತ್ತಷ್ಟು ಕೊನರುತ್ತಿತ್ತು.

ಭೀಕರ ಬರಗಾಲವು ಆವರಿಸಿದ ಆ ಸಮಯದಲ್ಲಿ ಜನರಲ್ಲಿ ಬದುಕಿನ ಕುರಿತು ಆಸೆಯೇ ಕಮರಿ ಹೋಗಿ ಹತಾಶೆ ಅವರಲ್ಲಿ ಬೇರು ಬಿಟ್ಟಿತ್ತು. ಇಂತಹ ಸಮಯದಲ್ಲಿ ಆಕೆ ಹಸಿದ ಹಾಗೂ ನೋವಿನಿಂದ ನರಳುತ್ತಿದ್ದ ಜನರಿಗೆ ಸಹಾನುಭೂತಿಯನ್ನು ನೀಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದಳು. ಆಕೆ ನೊಂದವರ ಪಾಲಿಗೆ ನೆಮ್ಮದಿಯ ತಾಣವಾಗಿದ್ದರು. ಅವರ ಕಣ್ಣೀರು ವರೆಸುವ ತಾಯಿಯಾಗಿ, ಸೋದರಿಯಾಗಿ ಅವರಲ್ಲಿ ಭರವಸೆಯನ್ನು ಮೂಡಿಸುತ್ತಿದ್ದರು

ನಂತರ ಶಾಂತಿ ಸುಧಾ ಘೋಷ್ ಅವರು ಹೆಣ್ಣು ಮಕ್ಕಳ ಹೈಸ್ಕೂಲಿನ ಮುಖ್ಯೋಪಾಧ್ಯಾಯಿನಿಯಾಗಿ ಕಾರ್ಯನಿರ್ವಹಿಸಿದರು. ಹೆಣ್ಣು ಮಕ್ಕಳ ಸಬಲೀಕರಣದ ಕುರಿತು ಭಾರತ ದೇಶ 1947 ರಲ್ಲಿ ಸ್ವಾತಂತ್ರ್ಯ ಪಡೆಯುವವರೆಗೂ ಆಕೆ ಯೋಚಿಸಿದ್ದು ಹೆಣ್ಣು ಮಕ್ಕಳಿಗೆ ನಿಜವಾದ ಸ್ವಾತಂತ್ರ್ಯ ಸಿಗುವುದು ಶಿಕ್ಷಣದಿಂದ ಎಂದು. ಬೌದ್ಧಿಕ ಜಾಣ್ಮೆ ಹಾಗೂ ಶೈಕ್ಷಣಿಕ ಮೌಲ್ಯಗಳನ್ನು ಹೊಂದಿದ ನಾಗರಿಕರಿಂದ ದೇಶದ ಸ್ವಾತಂತ್ರ್ಯಕ್ಕೆ ನಿಜವಾದ ಅರ್ಥ ದೊರೆಯುತ್ತದೆ ಎಂದೇ ಆಕೆ ಸಾರುತ್ತಿದ್ದರು.

ಜೋರಾದ ಧ್ವನಿ ಹಾಗೂ ಖಡ್ಗಗಳಿಂದ ಮಾತ್ರ ಕ್ರಾಂತಿ ಸಾಧ್ಯವಿಲ್ಲ... ಬದಲಾಗಿ ನೈತಿಕ ಶಕ್ತಿ, ಭರವಸೆಯನ್ನು ಹೊತ್ತ ಹೃದಯ ಹಾಗೂ ನಿಖರವಾದ ಗುರಿಯನ್ನು ಹೊಂದಿದ ವ್ಯಕ್ತಿತ್ವದಿಂದ ಕೂಡ ಕ್ರಾಂತಿಯನ್ನು ಮಾಡಲು ಸಾಧ್ಯ ಎಂಬುದು ಸುಧಾ ಅವರ ಬದುಕಿನಿಂದ ನಾವು ಅರಿಯಬಹುದು. ತಮ್ಮ ಬದುಕಿನ ಪ್ರತಿ ಕ್ಷಣವನ್ನು ದೇಶದ ಏಳಿಗೆಗಾಗಿ, ದೇಶದ ಜನತೆಗಾಗಿ ಹಾಗೂ ಧೈರ್ಯ, ನಂಬಿಕೆ ಹಾಗೂ ಸಹಾನುಭೂತಿಯಿಂದ ದೇಶದ ಇತಿಹಾಸವನ್ನೇ ಬದಲಿಸಬಹುದು ಎಂಬುದಕ್ಕೆ ಸುಧಾ ಅವರೇ ಸಾಕ್ಷಿ.

ಶಾಂತಿ ಸುಧಾ ಘೋಷ್ ರಂತಹ ಹೆಣ್ಣು ಮಕ್ಕಳು ಮತ್ತೆ ಹುಟ್ಟಿ ಬರಲಿ ಎಂಬ ಆಶಯವನ್ನು ವ್ಯಕ್ತಪಡಿಸುತ್ತಾ

**ವೀಣಾ ಹೇಮಂತಗೌಡ ಪಾಟೀಲ್**
**ಮುಂಡರಗಿ ಗದಗ್**

# ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆಗೆ ವಿದ್ಯುಕ್ತ ಚಾಲನೆ

ಧೈರ್ಯದ ದಾರಿ

**ರಾಯಚೂರು ಫೆ.1–** ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಅಂಗವಾಗಿ ಜಿಲ್ಲಾಡಳಿತ ರೂಪಿಸಿರುವ ಜ್ಯೋತಿ ರಥಯಾತ್ರೆಗೆ ಫೆಬ್ರವರಿ 01ರಂದು ಚಾಲನೆ ಸಿಕ್ಕಿತು.

ನಗರದ ಐತಿಹಾಸಿಕ ಕರ್ನಾಟಕ ಸಂಘದ ಆವರಣದಿಂದ ರಥಯಾತ್ರೆ ಆರಂಭಗೊಂಡಿತು.

ರಥಯಾತ್ರೆ ಚಾಲನೆ ಹಿನ್ನೆಲೆಯಲ್ಲಿ ಕರ್ನಾಟಕ ಸಂಘದ ಆವರಣದಲ್ಲಿ ಬೆಳಗ್ಗೆ ಹಬ್ಬದ ಸಂಭ್ರಮ ಕಂಡು ಬಂದಿತು.

ಹೂವು, ತಳಿರು ತೋರಣಗಳಿಂದ ಶೃಂಗರಿಸಿದ್ದ ರಥವು ಗಮನ ಸೆಳೆಯಿತು. ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಒಂದೇ ಬಣ್ಣದ ಸೀರೆ ಧರಿಸಿ ಆಗಮಿಸಿ ಕಾರ್ಯಕ್ರಮದ ಕಳೆ ಹೆಚ್ಚಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಈ ರಥಯಾತ್ರೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಚಾಲನೆ ನೀಡಿದರು.

ಜಿಲ್ಲಾಡಳಿತದ ಸೂಚನೆ ಹಿನ್ನೆಲೆ, ರಜೆ ದಿನವಾದ ಭಾನುವಾರವೂ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಮ್ಮತಮ್ಮ ಕಚೇರಿಯ ಸಿಬ್ಬಂದಿಯೊಂದಿಗೆ ಆಗಮಿಸಿದ್ದರು.

ಜ್ಯೋತಿ ರಥಯಾತ್ರೆ ಕಾರ್ಯಕ್ರಮದಲ್ಲಿ ಶಾಲಾ–ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಜಾಥಾ: ನಗರದ ಬಂಗಾರ ಬಜಾರ್, ಸದರ್ ಬಜಾರ್, ಹಳೆ ನಗರಸಭೆ ಕಚೇರಿ ಮುಂಭಾಗ, ಕೇಂದ್ರ ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ಬಸವೇಶ್ವರ ವೃತ್ತದ ಮೂಲಕ ಮಾನವಿಯತ್ತ ಹೊರಟಿತು.



ಈ ಜ್ಯೋತಿ ರಥಯಾತ್ರೆಯು ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಕವಿತಾಳ, ದೇವದುರ್ಗ, ಗಬ್ಬೂರ, ಅರಕೇರಾ, ಸಿರವಾರ ಸೇರಿದಂತೆ ಫೆ.5ರವರೆಗೆ ಜಿಲ್ಲೆಯಾದ್ಯಂತ ಬೇರೆ ಕಡೆಗಳಲ್ಲಿ ಸಂಚರಿಸಲಿದೆ.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಸಂತೋಷ ರಾಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಜಯಪ್ರಕಾಶ್ ಚವ್ಹಾಣ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧು ಆರ್. ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ರಾಯಚೂರು ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

ಮುಖಂಡರಾದ ರವಿ ಭೋಸರಾಜು, ಜಯವಂತರಾವ್ ಪತಂಗೆ, ಕೆ.ಶಾಂತಪ್ಪ, ರವಿ ಜಲ್ದಾರ್ ಸೇರಿದಂತೆ ವಿವಿಧ ದಿನಾಚರಣೆಗಳ ಆಚರಣಾ ಸಮಿತಿಯ ಸದಸ್ಯರು ಕೂಡ ಹಾಜರಿದ್ದರು.

## ವಿದ್ಯಾರ್ಥಿಗಳು ಸಾಹಿತ್ಯ ಅಭಿರುಚಿ ಬೆಳೆಸಿಕೊಳ್ಳಬೇಕು: ಡಾ.ಸಿದ್ದರಾಮ ಹೊನಕಲ್

**ಶಹಾಪುರ,ಫೆ.1–**ಇಂದಿನ ವಿದ್ಯಾರ್ಥಿಗಳು ವಿದ್ಯಾರ್ಥಿದೆಸೆಯಿಂದಲೇ ಸಾಹಿತ್ಯದ ಅಭಿರುಚಿ ಬೆಳೆಸಿಕೊಳ್ಳುವುದರ ಜೊತೆಗೆ ಬದುಕಿನಲ್ಲಿ ನೈತಿಕ ಮೌಲ್ಯಗಳು ಅಳವಡಿಸಿಕೊಳ್ಳಬೇಕೆಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರಾದ ಡಾ.ಸಿದ್ದರಾಮ ಹೊನಕಲ್ ಸಲಹೆ ನೀಡಿದರು.

ಶಹಾಪುರ ಪಟ್ಟಣದ ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು ವತಿಯಿಂದ ಆಯೋಜಿಸಿದ ಚಕೋರ ಹಾಗೂ ಸಾಹಿತ್ಯ ವಿಚಾರ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಇಂಟರ್ನೆಟ್, ಮೊಬೈಲ್ ಗಳಿಂದ ದೂರವಿದ್ದು ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದಬೇಕು,ಅಲ್ಲದೆ ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿ ಉಳಿವಿಗಾಗಿ ಇಂದಿನ ಯುವ ಪೀಳಿಗೆ ಶ್ರಮಿಸಬೇಕಾಗಿದೆ ಎಂದು ನುಡಿದರು.

ರಾಜ್ಯಶಾಸ್ತ್ರದ ಉಪನ್ಯಾಸಕ ಡಾ: ಬಿ.ಆರ್.ಅಂಚೆಸೂಗೂರು ಮಾತನಾಡಿ ಪ್ರಜಾಪ್ರಭುತ್ವವು ಕೇವಲ ಮತದಾನವಲ್ಲ ಅದು ನಾಗರಿಕರ ಸಕ್ರಿಯ ಭಾಗವಹಿಸುವಿಕೆ ಮತ್ತು ಸಾಂವಿಧಾನಿಕ ಮೌಲ್ಯಗಳ ಆಚರಣೆಯಾಗಿದೆ.ಜೊತೆಗೆ ಭಾರತೀಯ ಪ್ರಜೆಗಳಾದ ನಾವು ಉತ್ತಮ ಬದುಕನ್ನು ಕಟ್ಟಿಕೊಳ್ಳಬೇಕಾದರೆ ಸಂವಿಧಾನ ಓದಿ ಅರ್ಥೈಸಿಕೊಳ್ಳಬೇಕು ಎಂದು ಸವಿಸ್ತಾರವಾಗಿ ಉಪನ್ಯಾಸ ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ವಾಯ್.ಎಚ್.ವಜ್ಜಲ್ ವಹಿಸಿಕೊಂಡಿದ್ದರು,ಈ ಸಮಾರಂಭದ ವೇದಿಕೆಯ ಮೇಲೆ ಉಪನ್ಯಾಸಕ ಸುರೇಶ್ ಬಾಬು ಅರುಣಿ ಆಂಗ್ಲ ಭಾಷಾ ಉಪನ್ಯಾಸಕಿ ಶೋಭಾ, ಕನ್ನಡ ಜಾಗೃತಿ ಸಮಿತಿ ಸದಸ್ಯ ಬಸವರಾಜ ಶಿಣ್ಣೂರ,ಉಪನ್ಯಾಸಕರಾದ ಹನುಮಂತರಾಯಗೌಡ,ಮೌನೇಶ್ ಜೊತೆಗೆ ಇನ್ನಿತರರು ಉಪಸ್ಥಿತರಿದ್ದರು,ಕುಮಾರಿ ಶ್ರೀದೇವಿ ಕಾರ್ಯಕ್ರಮದಲ್ಲಿ ಪ್ರಾರ್ಥಿಸಿದರು.

# ವಂಚಿತರಿಗೆ ಠೇವಣಿ ಮರುಪಾವತಿಸಲು ಟಿಪಿಜೆಪಿ ಆಗ್ರಹ

**ಕಲಬುರಗಿ: ಫೆ.1:**ಕೇಂದ್ರ ಸರ್ಕಾರ 2019ರಲ್ಲಿ ಜಾರಿಗೊಳಿಸಿದ ಬಡ್ಸ್ ಕಾಯ್ದೆಯನ್ನು (ಅನಿಯಂತ್ರಿತ ಠೇವಣಿ ಯೋಜನೆಗಳ ನಿಷೇಧ ಕಾಯ್ದೆ) ಕರ್ನಾಟಕ ರಾಜ್ಯದಲ್ಲಿ ಸಮರ್ಪಕವಾಗಿ ಜಾರಿಗೊಳಿಸುವ ಮೂಲಕ ವಿವಿಧ ಖಾಸಗಿ ಹಣಕಾಸು ಸಂಸ್ಥೆ, ಕಂಪನಿಗಳಿಂದ ವಂಚಿತರಾದ ಗ್ರಾಹಕರಿಗೆ ಹಣ ಮರುಪಾವತಿ ಮಾಡುವಂತೆ ಥುಗಿ ಪೀಡಿತ್ ಜಮಾಕರ್ತಾ ಪರಿವಾರ (ಟಿಪಿಜೆಪಿ), 'ವಂಚನೆ ಸಂತ್ರಸ್ತ ಠೇವಣಿದಾರರ ಕುಟುಂಬ' ಜಿಲ್ಲಾ ಸಮಿತಿ ಆಗ್ರಹಿಸಿದೆ.

ಈ ಕುರಿತು ಜಿಲ್ಲಾ ಸಮಿತಿ ಅಧ್ಯಕ್ಷ ವೈ.ಎಸ್. ತಳವಾರ ಅವರು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲರಿಗೆ ಮನವಿಪತ್ರ ಸಲ್ಲಿಸಿ, ಈ ಬಗ್ಗೆ ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಹಿಂದೂ ಮಹಾಸಭಾ ರಾಜ್ಯ ಉಪಾಧ್ಯಕ್ಷರು, ಟಿಪಿಜೆಪಿ ಸದಸ್ಯರು ಹಾಗೂ ಪಾರಂಪಕರಿಕ ವೈದ್ಯರಾದ ದಿನಕರರಾವ ನಾರಾಯಣರಾವ ಕುಲಕರ್ಣಿ ಅಷ್ಟಗಿ ಮಾತನಾಡಿ, ಖಾಸಗಿ ಹಣಕಾಸು ಕಂಪನಿಗಳಲ್ಲಿ ಹಣ ಹೂಡಿಕೆ ಮಾಡಿ ವಂಚಿತರಾದವರ ಹಿತರಕ್ಷಣೆಗಾಗಿ ಕೇಂದ್ರ ಸರ್ಕಾರ 2019ರಲ್ಲಿ ಬಡ್ಸ್ ಕಾಯ್ದೆ ಜಾರಿಗೊಳಿಸಿದ್ದು, ಈ ಕಾಯ್ದೆಯನ್ನು ಕರ್ನಾಟಕದಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕೆಂದು ಆಗ್ರಹಿಸಿದರು.

ಭಾರತ ದೇಶದಾದ್ಯಂತ ಬಡವರು, ಕೂಲಿಕಾರ್ಮಿಕರು, ಮಧ್ಯಮ ವರ್ಗದವರು, ಜನಸಾಮಾನ್ಯರು ಕಷ್ಟಪಟ್ಟು ದುಡಿದು ಕೂಡಿಟ್ಟ ಹಣವನ್ನು ಖಾಸಗಿ ಸಂಸ್ಥೆಗಳಲ್ಲಿ ಹೂಡಿದ್ದಾರೆ. ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದಿರುವ ಪಿಎಸಿಎಲ್, ಗರಿಮಾ, ಅಗ್ರಿಗೋಲ್ಡ್, ಇಸ್ಟೋರ್ ಇಂಡಿಯಾ, ಸಮೃದ್ಧಿ ಜೀವನ, ಗುರುಟೀಕ್, ಹೀಗೆ ಹಲವಾರು ಕಂಪನಿಗಳಲ್ಲಿ ಹೂಡಿಕೆ ಮಾಡಿದ್ದಾರೆ. ಈ ಕಂಪನಿಗಳು ಸೇರಿದಂತೆ ಹಲವಾರು ಕಂಪನಿಗಳನ್ನು 2014ರಲ್ಲಿ ಕೇಂದ್ರ ಸರ್ಕಾರ ಬಂದ್ ಮಾಡಿದೆ. ಆದರೆ 10 ವರ್ಷ ಗತಿಸಿದರೂ, ಗ್ರಾಹಕರಿಗೆ ಹಣ ತಲುಪಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

ಅನೇಕ ಕಂಪನಿಗಳ ಮಾಲಿಕರು ಸಾಕಷ್ಟು ಆಸ್ತಿಗಳನ್ನು ಮಾಡಿಕೊಂಡಿದ್ದಾರೆ. ಅಂಥ ಮಾಲಿಕರ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡು ಗ್ರಾಹಕರಿಗೆ ಹಣ ಮರಳಿಸಿ ನ್ಯಾಯ ಒದಗಿಸಿಕೊಡಬೇಕು. ಕೇಂದ್ರ ಸರ್ಕಾರದ ಬಡ್ಸ್ ಕಾಯ್ದೆ 2019ರ ಪ್ರಕಾರ ಗ್ರಾಹಕರಿಗೆ 180 ದಿನಗಳಲ್ಲಿ ಗ್ರಾಹಕರಿಗೆ ಪಾವತಿಸಬೇಕು ಎನ್ನುವ ನಿಯಮಿದ್ದರೂ ನಿಯಮವನ್ನು ಗಾಳಿಗೆ ತೂರಿದ್ದಾರೆ. ಸರ್ಕಾರ ಕೂಡಲೇ ಬಡ್ಸ್ ಕಾಯ್ದೆಯನ್ನು



ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಗ್ರಾಹಕರಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು. ಸರ್ಕಾರ ಸ್ಪಂದಿಸಿ ಸಮಸ್ಯೆ ಪರಿಹರಿಸಬೇಕು, ಅಲ್ಲಿಯವರೆಗೂ ಅನಿರ್ದಿಷ್ಟ ಧರಣಿ ಮುಂದುವರಿಯಲಿದೆ, ಅಲ್ಲದೇ ಉಗ್ರ ಹೋರಾಟಕ್ಕಿಳಿಯುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಸಿದರು.

ಟಿಪಿಜೆಪಿ ಜಿಲ್ಲಾ ಅಧ್ಯಕ್ಷ ವೈ.ಎಸ್. ತಳವಾರ, ಉಪಾಧ್ಯಕ್ಷ ವಿಜಯಕುಮಾರ ಶೆಟ್ಟಿ, ಕಾರ್ಯದರ್ಶಿ ಸಿದ್ರಾಮ ಕಟ್ಟಿ, ಸತೀಶ ನಲ್ಲಿ, ಮದನರಾವ ಕುಲಕರ್ಣಿ, ಶ್ರೀಶೈಲ ಪಾಟೀಲ, ವೆಂಕಾರೆಡ್ಡಿ ಪಾಟೀಲ, ಶಕುಂತಲಾ ಬಿಳವಾರ, ಎಂ.ಜಿ. ಬಿರಾದಾರ, ಯುವರಾಜ ಪಾಟೀಲ, ಎ.ಎನ್. ಪರೀಟ, ಸಿದ್ದಣ್ಣ ನಿರಲಕೋಡ, ಮತ್ತಿತರರು ಇದ್ದರು.

ಜಿಲ್ಲಾಡಳಿತದ ವತಿಯಿಂದ ಶ್ರೀ ಮಡಿವಾಳ ಮಾಡಿದೇವ ಜಯಂತಿ ಆಚರಣೆ

# ಮಡಿವಾಳ ಮಾಚಿದೇವರ ಮಾರ್ಗದಲ್ಲಿ ನಡೆಯಿರಿ: ಪರಮೇಶ್ವರ ಸಾಲಿಮಠ

ಧೈರ್ಯದ ದಾರಿ

**ರಾಯಚೂರು ಫೆ.1–** ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ತೋರಿದ ಹಾದಿಯಲ್ಲಿ ಮಡಿವಾಳ ಮಾಚಿದೇವರು ನಡೆದು, ಎಲ್ಲ ಶರಣರ ವಚನ ಸಾಹಿತ್ಯವನ್ನು ಸಂರಕ್ಷಣೆ ಮಾಡಿದರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕೆಂದು ಸೀತಾ ಸುಬ್ಬರಾಜು ಸ್ಮಾರಕ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯರಾದ ಪರಮೇಶ್ವರ ಸಾಲಿಮಠ ಅವರು ಹೇಳಿದರು.

ಫೆ.01ರ ಭಾನುವಾರ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಡಿವಾಳ ಮಾಡಿದೇವ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಸಾಮಾಜಿಕ ವ್ಯವಸ್ಥೆಯ ಕೆಳ ಸ್ಥರದಲ್ಲಿದ್ದ ಜಾತಿಗಳಿಗೆ ವಿದ್ಯೆ ಕಲಿಯಲು ಅವಕಾಶ ಇಲ್ಲದ ದಿನಗಳಲ್ಲಿ ಸಾಕಷ್ಟು ವಿಷಯಗಳನ್ನು ಅಧ್ಯಯನ ಮಾಡಿ ಪಾಂಡಿತ್ಯ ಗಳಿಸಿದ್ದವರು ವೀರ ಗಣಾಚಾರಿ ಮಡಿವಾಳ ಮಾಚಿದೇವರು. ಬಸವಣ್ಣನವರು ಮಾಚಿದೇವರನ್ನು ತಂದೆ ಎಂದು ಕರೆದಿದ್ದರು. ಇದು ಮಾಚಿದೇವರ ಮೇಲಿರುವ ಬಸವಣ್ಣನವರ ಗೌರವದ ಪ್ರತೀಕ ಎಂದು ಹೇಳಿದರು.

ಮಡಿವಾಳ ಕುಲದಲ್ಲಿ ಹುಟ್ಟಿದ್ದರೂ ಮಾಚಯ್ಯ ಉತ್ತಮ ಶಿಕ್ಷಣ ಮತ್ತು ಶರಣರ ಸಂಪರ್ಕದಿಂದ ಮಹಾಪುರುಷರಾದರು. ಕಲ್ಯಾಣ ಕ್ರಾಂತಿಯ ಇತಿಹಾಸದಲ್ಲಿ ಮಾಚಯ್ಯ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರು. ಜ್ಞಾನಜ್ಯೋತಿಯಿಂದ ಲೋಕವನ್ನು ಬೆಳಗಿಸಿದ ಮಾಚಯ್ಯ ನುಡಿದಂತೆ ನಡೆದ, ನಡೆದಂತೆ ನುಡಿದ ಶರಣರಲ್ಲಿ ಒಬ್ಬರು. ಎಲ್ಲರೂ ಸಮಾನರು, ಎಲ್ಲರಿಗೂ ಸಮಾನ ಅಧಿಕಾರವಿದೆ ಎಂದು ತಿಳಿಸಿ ಸರ್ವರಿಗೂ ಆಧ್ಯಾತ್ಮಿಕ ಉನ್ನತಿ ಪಡೆಯುವಂತೆ ಪ್ರೋತ್ಸಾಹಿಸಿದರು.




ಈ ವೇಳೆ ಸಮಾಜದ ಜಿಲ್ಲಾಧ್ಯಕ್ಷರಾದ ಜಂಬಣ್ಣ ಅವರು ಮಾತನಾಡಿ, ಜಾತಿ ಪದ್ಧತಿ ಹೋಗಲಾಡಿಸಲು ಅನೇಕ ಶರಣರು ಶ್ರಮಿಸಿದ್ದು, ಅವರಲ್ಲಿ ಮಡಿವಾಳ ಮಾಚಿದೇವ ಪ್ರಮುಖರಾಗಿದ್ದಾರೆ. ಅವರ ಆಚಾರ ವಿಚಾರವನ್ನು ಸಮಾಜದವರು ಪ್ರತಿಯೊಬ್ಬರೂ ಪಾಲಿಸಬೇಕು ಎಂದರು.

ಡಾ. ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಎಲ್ಲರಿಗೂ ಅವಕಾಶಗಳನ್ನು ನೀಡಲಾಗಿದ್ದು, ಅವುಗಳನ್ನು ಸರಿಯಾಗಿ ಬಳಸಿಕೊಳ್ಳುವ ಮೂಲಕ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು. ಸಮಾಜದ ಮಕ್ಕಳಿಗೆ ಹೆಚ್ಚಿನ ಮಟ್ಟದಲ್ಲಿ ಶಿಕ್ಷಣ ನೀಡಲು ಪೋಷಕರು ಆದ್ಯತೆ ನೀಡಬೇಕು. ಉನ್ನತ ಹುದ್ದೆಯಲ್ಲಿ ಸಮಾಜದವರು ಕಾರ್ಯನಿರ್ವಹಿಸುವ ಮೂಲಕ ಸಮಾಜದ ಏಳಿಗೆಗೆ ಶ್ರಮಿಸಬೇಕು ಎಂದು ಹೇಳಿದರು.

ಮಡಿವಾಳ ಮಾಚಿದೇವ ಭಾವಚಿತ್ರ ಮೆರವಣಿಗೆ: ಕಾರ್ಯಕ್ರಮಕ್ಕೂ ಮೊದಲು ನಗರದ ಆರ್.ಟಿ.ಓ ಸರ್ಕಲ್ ಹತ್ತಿರುವರ ಮಡಿವಾಳ ಮಾಚಿದೇವ ಅವರ ಪುತ್ಥಳಿಗೆ ಸ್ವಾಮೀಜಿಗಳು ಸೇರಿದಂತೆ ವಿವಿಧ ಗಣ್ಯರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಈ ವೇಳೆ ಕಿಲ್ಲೇ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿ, ಸೋಮವಾರಪೇಟೆ ಹಿರೇಮಠದ ಅಭಿನವ ರಾಚೋಟಿ ವೀರಶಿವಾಚಾರ್ಯ ಸ್ವಾಮಿ ಅವರ ಸಾನಿಧ್ಯದಲ್ಲಿ ಪೂಜೆ ಸಲ್ಲಿಸಲಾಯಿತು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಚಾಲನೆ ನೀಡಿದರು. ಈ ವೇಳೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ಮುಖಂಡರಾದ ರವಿ ಜಲ್ದಾರ್ ಸೇರಿದಂತೆ ಸಮಾಜದ ಮುಖಂಡರು ಶಾಸಕರಿಗೆ ಸಾಥ್ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ್, ಕಂದಾಯ ಅಧಿಕಾರಿ ನರಸಿಂಹ ರೆಡ್ಡಿ, ಸಮಾಜದ ಮುಖಂಡರಾದ ಪಿ.ಶಿವಮೂರ್ತಿ, ಪಿ.ಮಲ್ಲೇಶ, ಎಂ.ಹುಸೇನ್, ನರಸಪ್ಪ, ವೆಂಕಟೇಶ, ಮುನಿಸ್ವಾನಿ, ಜಿ.ವೆಂಕಟೇಶ, ಜಮಾನ, ಈರಮ್ಮ, ದಂಡಪ್ಪ ಬಿರಾದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

## ಕಾಕತೀಯ ಶಿಕ್ಷಣ ಸಂಸ್ಥೆಯ 30 ನೇ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ,ಫೆ.1–** ಪಟ್ಟಣದ ಕಾಕತೀಯ ಶಿಕ್ಷಣ ಸಂಸ್ಥೆಯ ಕಾಕತೀಯ ಶಾಲಾ ಆವರಣದಲ್ಲಿ ನಡೆದ 30 ನೇ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡಿ ಕಾಕತೀಯ ಶಿಕ್ಷಣ ಸಂಸ್ಥೆಯು ಈ ಭಾಗದ ವಿದ್ಯಾರ್ಥಿಗಳಿಗೆ ಅಂಗ್ಲ ಮಾಧ್ಯಮವನ್ನು ಪರಿಚಯಿಸಿ ಕಳೆದ 30 ವರ್ಷಗಳಿಂದ ಗುಣಮಟ್ಟದ ಶಿಕ್ಷಣವನ್ನು ನೀಡುತ್ತ ಬಂದಿದೆ. ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಪಠ್ಯದ ಜೊತೆಗೆ ಅತ್ಮಸ್ಥೈರ್ಯವನ್ನು,ಧೈರ್ಯವನ್ನು,ಜೀವನದಲ್ಲಿ ಮುನ್ನಡೆಯಬೇಕೆನ್ನುವ ಅತ್ಮವಿಶ್ವಾವಸವನ್ನು ಮೂಡಿಸುವ ಕಾರ್ಯವನ್ನು ಮಾಡಬೇಕಾಗಿದೆ ಎಂದು ತಿಳಿಸಿದರು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ನೀಡಿಗೌರವಿಸಲಾಯಿತು. ಉತ್ತಮ ಪಾಲಕರಿಗೆ ಸಾನ್ಮನ ಮಾಡಲಾಯಿತು. ಪ್ರಾಥಮಿಕ ಹಾಗೂ ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. 10 ನೇ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ 624 ಅಂಕಗಳನ್ನು ಪಡೆದ ವರ್ಷ ಮೇಟಿ ರವರಿಗೆ ಬಂಗಾರದ ಪದಕ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯಾಧೀಶರಾದ ಶಿವರಾಜ ವಿ,ಸಿದ್ದೇಶ್ವರ, ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ, ತಾ. ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ರಾಜಾ ಸುಭಾಷಚಂದ್ರನಾಯಕ, ಡಾ.ಸ್ನೇಹಲತಾಬೆಟ್ಟದೂರು, ಕಾಕತೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಗೊಡವರ್ತಿ ಸತ್ಯನಾರಾಯಣ, ಉಪಾಧ್ಯಕ್ಷರಾದ ಮನ್ನೆಉದಯ್ ಭಾಸ್ಕರ್ ರಾವ್, ಕಾರ್ಯದರ್ಶಿ ಗೊಡವರ್ತಿ ಶ್ರೀನಿವಾಸರಾವು, ಚದಲವಾಡ ಸುಬ್ಬರಾವ್, ತಾಳ್ಳೂರಿ ರಾಮಕೃಷ್ಣ, ಜಾಲಾದಿ ಪ್ರಭಾಕರ, ವೇಮೂರಿ ನಾಗೇಶ್ವರರಾವ್, ಬೊಪ್ಪನ ಪಣೇಂದ್ರಕುಮಾರ, ವೇಗುಳ್ಳ ಸುರೇಶ, ಕೊಡವಟಿ ಶ್ರೀನಿವಾಸ, ಚಿಲಕೂರಿ ಪ್ರಸಾದ್ ರಾವ್, ಶಾಲೆಯ ಮುಖ್ಯಗುರು ವೀರಭದ್ರಗೌಡ.ಕೆ, ಮುಖಂಡರಾದ ಎಸ್.ಸುಬ್ರಮಣ್ಯಂ, ಸೇರಿದಂತೆ ಇನ್ನಿತರರು ಇದ್ದರು.

## ಭಕ್ತಿಯ ಪರಾಕಾಷ್ಠೆ ಮೆರೆದ ಭಕ್ತಗಣ ವಿಜೃಂಭಣೆಯಿಂದ ಜರುಗಿದ ಮಲ್ಲಿಕಾರ್ಜುನ ರಥೋತ್ಸವ

ಧೈರ್ಯದ ದಾರಿ

**ಮಸ್ಕಿ,ಫೆ,1–** ಎರಡನೇ ಶ್ರೀಶೈಲವೆಂದೇ ಪ್ರಸಿದ್ಧಿ ಪಡೆದಿರುವ ಈ ಭಾಗದ ಧಾರ್ಮಿಕ ಕೇಂದ್ರಗಳಲ್ಲಿ ಒಂದಾದ ಐತಿಹಾಸಿಕ ಮಲ್ಲಿಕಾರ್ಜುನ ಸ್ವಾಮಿಯ ರಥೋತ್ಸವವು ಭಾರತ ಹುಣ್ಣಿಮೆಯ ದಿನದಂದು ಭಕ್ತರ ಜಯ ಘೋಷಗಳೊಂದಿಗೆ ವಿಜೃಂಭಣೆಯಿಂದ ಜರುಗಿತು.



ಬೆಳಿಗ್ಗೆ ದೇವಸ್ಥಾನದಲ್ಲಿ ಮಲ್ಲಿಕಾರ್ಜುನ ಲಿಂಗಕ್ಕೆ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು. ನಂತರ ರಥೋತ್ಸವದ ಕಳಸ ಪ್ರತಿಷ್ಠಾಪಿಸಲಾಯಿತು. ಭಕ್ತರು ದೀಡ್ ನಮಸ್ಕಾರ, ರಥಕ್ಕೆ ದೀಪದ ಎಣ್ಣೆ ಹಾಕುವ ಮೂಲಕ ತಮ್ಮ ಹರಕೆ ಸಲ್ಲಿಸಿದರು. ಸಂಜೆ 5ಗಂಟೆಗೆ ಮಲ್ಲಿಕಾರ್ಜುನನ ಉತ್ಸವ ಮೂರ್ತಿ ಹೊತ್ತ ಪಲ್ಲಕ್ಕಿಯನ್ನು ರಥದ ಸುತ್ತ 5 ಬಾರಿ ಪ್ರದಕ್ಷಿಣೆ ಹಾಕಿಸಿದ ನಂತರ ಪಲ್ಲಕ್ಕಿಯಲ್ಲಿನ ಉತ್ಸವ ಮೂರ್ತಿಯನ್ನು ಭಕ್ತರ ಜಯಘೋಷಗಳ ನಡುವೆ ರಥದ ಮೇಲೆ ಪ್ರತಿಷ್ಠಾಪಿಸಲಾಯಿತು. ಗಚ್ಚಿನ ಹಿರೇಮಠದ ವರರುದ್ರಮುನಿ ಶಿವಾಚಾರ್ಯರು ರಥಕ್ಕೆ ಧಾರ್ಮಿಕ ವಿಧಿ–ವಿಧಾನಗಳಂತೆ ಪೂಜೆ ಸಲ್ಲಿಸಿ ರಥೋತ್ಸವಕ್ಕೆ ವಿಧ್ಯುಕ್ತವಾಗಿ ಚಾಲನೆ ನೀಡಿದರು. ಭಕ್ತರು ಉತ್ತುತ್ತಿ, ಬಾಳೆ ಹಣ್ಣು ಎಸೆದು ಭಕ್ತಿ ಸಮರ್ಪಿಸಿದರು.

ಭೋವಿ (ವಡ್ಡರ್) ಸಮಾಜದ ಅನೇಕ ಯುವಕರು ದಿನ ಉಪವಾಸ ಹಾಗೂ ಮಡಿವಂತಿಕೆಯಿಂದ ತೆರಿನ ಕೆಳಗೆ ಇದ್ದು ರಥಕ್ಕೆ ಸೊನ್ನೆ ಹಾಕುವ ಮೂಲಕ ರಥೋತ್ಸವದ ಯಶಸ್ವಿಗೆ ಕಾರಣರಾದರು.

ಈ ವೇಳೆ, ಊರಿನ ಮುಖಂಡರಾದ ಮಹಾದೇವಪ್ಪಗೌಡ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್, ಮಲ್ಲಿಕಾರ್ಜುನ ದೇವಸ್ಥಾನದ ಪ್ರಧಾನ ಅರ್ಚಕರಾದ ಸಿದ್ದಯ್ಯ ಹೆಸರೂರು ಹಿರೇಮಠ, ವಿಶ್ವನಾಥ ಸೊಪ್ಪಿಮಠ, ಸೇರಿದಂತೆ ಊರಿನ ಪ್ರಮುಖ ಮುಖಂಡರು ಹಾಗೂ ಸಾವಿರಾರು ಸಂಖ್ಯೆಯಲ್ಲಿ ಭಕ್ತಾಧಿಗಳಿದ್ದರು.

## ಎಸ್ಸಿ ಎಸ್ಟಿ ನೌಕರರ ಸಮನ್ವಯ ಸಮಿತಿಗೆ ರಾಮಲಿಂಗಪ್ಪ ನಾಯಕ ಆಯ್ಕೆ



ಧೈರ್ಯದ ದಾರಿ

**ಮಾನ್ವಿ,ಫೆ.1–** ಪಟ್ಟಣದ ಸರಕಾರಿ ನೌಕರರ ಭವನದಲ್ಲಿ ನಡೆದ ಕರ್ನಾಟಕ ರಾಜ್ಯ ಸರಕಾರಿ ಎಸ್ಸಿ ಎಸ್ಟಿ ನೌಕರರ ಸಮನ್ವಯ ಸಮಿತಿ (ರಿ)ಮಾನ್ವಿ ನೂತನ ಪದಾಧಿಕಾರಿಗಳ ಆಯ್ಕೆಯಲ್ಲಿ ತಾಲೂಕ ಘಟಕದ ನೂತನ ಅಧ್ಯಕ್ಷರಾಗಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಮಲಿಂಗಪ್ಪ ನಾಯಕ ಆಯ್ಕೆಯಾಗಿದ್ದಾರೆ.

ಅದೇ ರೀತಿಯಾಗಿ ಗೌರವ ಅಧ್ಯಕ್ಷರಾಗಿ ನರಸಿಂಹ ಮತ್ತು ಕಾರ್ಯದರ್ಶಿಯಾಗಿ ಶ್ರೀನಿವಾಸ್ ಜಾಲ್ದಾರ್ ಆಯ್ಕೆಯಾಗಿದ್ದಾರೆ.

ಮಾನ್ವಿ ತಾಲೂಕಿನ ನೌಕರರ ಸಂಘದ ಅಧ್ಯಕ್ಷರಾದ ಸುರೇಶ ಕುರ್ಡಿ, ಪ್ರಧಾನ ಕಾರ್ಯದರ್ಶಿಯಾದ ಹಂಪಣ್ಣ ಚಂಡೂರು, ಖಜಾಂಚಿಯಾದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಯಾದ ಭಾಗಯ್ಯ ನಾಯಕ, ಜಿಲ್ಲಾ ಸಂಘಟನ ಕಾರ್ಯದರ್ಶಿ ಯಾದ ತಿಮ್ಮೇಶ ನಾಯಕ, ಚಂದ್ರಶೇಖರ ಹೂಗಾರ, ಶಂಕರ್, ರಾಮು ಹೊಳೆಯಪ್ಪ , ಈರಣ್ಣ , ಗೋಪಾಲ ನಾಯಕ, ಮಲ್ಲಿಕಾರ್ಜುನ, ಶ್ರೀನಿವಾಸ ಇತರರು ಸೇರಿ ಆಯ್ಕೆ ಮಾಡಿದ್ದಕ್ಕಾಗಿ ರಾಮಲಿಂಗಪ್ಪ ನಾಯಕ ಅಭಿನಂದನೆಗಳು ತಿಳಿಸಿದ್ದಾರೆ. ನಂತರ ಮಾತನಾಡಿ ಕೊಟ್ಟಂತಹ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಭಾಯಿಸಿಕೊಂಡು ಹೋಗುತ್ತೇನೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಇತರರು ಉಪಸ್ಥಿತರಿದ್ದರು.

## ಕಬ್ಬಿನ ಬಾಕಿ ಹಣ ಪಾವತಿಗೆ ಮನವಿ



**ಚಿಂಚೋಳಿ,ಫೆ.1:** ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆ ಸಚಿವ ಡಾ. ಶರಣಪ್ರಕಾಶ ಪಾಟೀಲ, ಅವರು ಆಗಮಿಸಿದ ಸಂದರ್ಭದಲ್ಲಿ ತಾಲೂಕ ರೈತಪರಹಿತ ಹಿತರಕ್ಷಣಾ ಸಮಿತಿಯ ಅಧ್ಯಕ್ಷ ಅಬ್ದುಲ್ ಬಾಷಿದ್, ಅವರು ಚಿಂಚೋಳಿ ಮತ್ತು ಕಾಳಗಿ ತಾಲೂಕಿನ ರೈತರು ತಮ್ಮ ಹೊಲದಲ್ಲಿ ಬೆಳೆದ ಕಬ್ಬನ್ನು ಚಿಂಚೋಳಿಯ ಸಿದ್ದ ಸಿರಿ ಎಥಿನಾಲ ಕಾರ್ಖಾನೆಗೆ ರೈತರು ಕಬ್ಬನ್ನು ಮಾರಾಟ ಮಾಡಿದ್ದು ಸರ್ಕಾರ ನಿಗದಿ ಮಾಡಿದ ದರ 2950 ರೂ. ನಿಗದಿ ಮಾಡಿದ್ದು ಆದರೆ ಸಿದ್ದ ಸಿರಿ ಎಥಿನಾಲ ಕಾರ್ಖಾನೆ ಅವರು 2500 ನಿಗದಿ ಮಾಡಿದ್ದಾರೆ ಸಿದ್ದ ಸಿರಿ ಎಥಿನಾಲ ಆಡಳಿತ ಮಂಡಳಿ ಅವರು ರೈತರಿಗೆ ಹಂತ ಹಂತವಾಗಿ ಇನ್ನ ಉಳಿದ ಕಂತು ಹಾಕ್ತೀನಿ ಅಂತ ಹೇಳಿದ್ದಾರೆ ಆದರೆ ಈಗ ಮೊದಲನೇ ಕಂತು ಕಬ್ಬಿನ ರೈತರಿಗೆ 150 ರೂಪಾಯಿ ಹಾಕಿದ್ದು ಉಳಿದ 250 ರೂಪಾಯಿ ಬಾಕಿ ಇದ್ದು ಕೂಡಲೇ ಸಿದ್ದ ಸಿರಿ ಎಥಿನಾಲ ಕಾರ್ಖಾನೆ ಹಣ ಬಿಡುಗಡೆ ಮಾಡಬೇಕೆಂದು ಮನವಿ ಮಾಡಿದರು ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ತಾಲೂಕ ಅಧ್ಯಕ್ಷರಾದ ಬಸವರಾಜ ಮಲಿ, ಕಾಂಗ್ರೆಸ್ ಪಕ್ಷದ ಮುಖಂಡರಾದ ಅಜೀತ್ ಪಾಟೀಲ, ಸುಭಾಷ್ ಚಂದ್ರ ಯಂಪಳ್ಳಿ, ಲಕ್ಷ್ಮಣ್ ಆವಂಟಿ, ನಾಗೇಶ್ ಗುಣಾಜಿ, ರೇವಣಸಿದ್ದಪ್ಪ ಪೂಜಾರಿ, ವಿಶ್ವನಾಥ್ ಹೊಡಬೀರನಳ್ಳಿ, ಮತ್ತು ಅನೇಕ ತಾಲೂಕ ರೈತಪರಹಿತ ಹಿತರಕ್ಷಣಾ ಸಮಿತಿಯ ಸದಸ್ಯರು ಇದ್ದರು

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE